ಕನ್ನಡಪ್ರಭ
ಬುಧವಾರ 6.05.2026

ಗರಿಷ್ಠ 38°c | ಕನಿಷ್ಠ 27°c

ಸುದ್ದಿ ಸಿಂಚನ

10ರಂದು ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ

ಕೊಪ್ಪಳ: ನಗರದ ಕಿನ್ನಾಳ ರಸ್ತೆಯಲ್ಲಿರುವ ಶ್ರೀ ಹೇಮರೆಡ್ಡಿ ಮಲ್ಲಮ್ಮ ದೇವಸ್ಥಾನದಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೊಪ್ಪಳ ನಗರಸಭೆ ಸಂಯುಕ್ತಾಶ್ರಯದಲ್ಲಿ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿಯನ್ನು ಮೇ 10 ರಂದು ಬೆಳಗ್ಗೆ 10.30ಕ್ಕೆ ಆಯೋಜಿಸಲಾಗಿದೆ.ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ ತಂಗಡಗಿ ಕಾರ್ಯಕ್ರಮ ಉದ್ಘಾಟಿಸುವರು. ಶಾಸಕ ದೊಡ್ಡನಗೌಡ ಪಾಟೀಲ, ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ, ಶಾಸಕ ಬಸವರಾಜ ರಾಯರಡ್ಡಿ ಘನ ಉಪಸ್ಥಿತಿ ವಹಿಸುವರು. ಕೊಪ್ಪಳ ಶಾಸಕ ಕೆ.ರಾಘವೇಂದ್ರ ಹಿಟ್ನಾಳ ಅಧ್ಯಕ್ಷತೆ ವಹಿಸುವರು. ಸಂಸದ ಕೆ.ರಾಜಶೇಖರ ಹಿಟ್ನಾಳ, ಗಂಗಾವತಿ ಶಾಸಕ ಜಿ. ಜನಾರ್ಧನ ರೆಡ್ಡಿ, ವಿಧಾನ ಪರಿಷತ್ ಸದಸ್ಯರಾದ ಶಶೀಲ್ ಜಿಡಿ. ನಮೋಶಿ, ಡಾ. ಚಂದ್ರಶೇಖರ ಬಿ. ಪಾಟೀಲ, ಶರಣಗೌಡ ಅನ್ನದಾನಗೌಡ ಪಾಟೀಲ ಬಯ್ಯಾಪೂರ ಹಾಗೂ ಹೇಮಲತಾ ನಾಯಕ, ಮುನಿರಾಬಾದ್ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ ತುಂಗಭದ್ರಾ ಯೋಜನೆಯ ಅಧ್ಯಕ್ಷ ಹಸನಸಾಬ ನಬಿಸಾಬ ದೋಟಿಹಾಳ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪ್ರಸನ್ನ ವಿ. ಗಡಾದ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ರೆಡ್ಡಿ ಶ್ರೀನಿವಾಸ ಪಾಲ್ಗೊಳುವರು. ವಿಶೇಷ ಆಹ್ವಾನಿತರಾಗಿ ಬಾಗಲಕೋಟೆ ಕೃಷ್ಣ ಮೇಲ್ದಂಡೆ ಯೋಜನೆಯ ಭೂಸ್ವಾದೀನ ಪುನರ್ವಸತಿ ಮತ್ತು ಪುನರ್‌ನಿರ್ಮಾಣ ಆಯುಕ್ತರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಕೆ.ಪಿ. ಮೋಹನರಾಜ್ ಅವರು ಆಗಮಿಸುವರು. ಸಿಂಧನೂರಿನ ನಿವೃತ್ತ ಶಿಕ್ಷಕರು ಹಾಗೂ ಜಾನಪದ ಸಾಹಿತಿಗಳಾದ ವೆಂಕನಗೌಡ ವಟಗಲ್ ಅವರು ಶ್ರೀ ಹೇಮರೆಡ್ಡಿ ಮಲ್ಲಮ್ಮ ಕುರಿತು ವಿಶೇಷ ಉಪನ್ಯಾಸ ನೀಡುವರು. ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ್, ಜಿಪಂ ಸಿಇಒ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್. ಅರಸಿದ್ದಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರವರು ಉಪಸ್ಥಿತರಿರುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕರ್ಣಕುಮಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಟಿಟಿಸಿ: ಡಿಪ್ಲೋಮಾ ಕೋರ್ಸ್‌ಗಳಿಗೆ ಅರ್ಜಿ ಆಹ್ವಾನ

ಕೊಪ್ಪಳ: ಸಮೀಪದ ದದೇಗಲ್‌ನ ಸರಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (ಜಿಟಿಟಿಸಿ)ದಲ್ಲಿ 2026-27ನೇ ಶೈಕ್ಷಣಿಕ ಸಾಲಿಗೆ ಎಸ್.ಎಸ್.ಎಲ್.ಸಿ. ತೇರ್ಗಡೆ ಹೊಂದಿದ ವಿದ್ಯಾರ್ಥಿಗಳಿಗಾಗಿ ಡಿಪ್ಲೋಮಾ ಕೋರ್ಸುಗಳಿಗೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಎಸ್.ಎಸ್.ಎಲ್.ಸಿ., ಪಿಯುಸಿ ಅಥವಾ ಐಟಿಐ ತೇರ್ಗಡೆ ಹೊಂದಿದ ವಿದ್ಯಾರ್ಥಿಗಳಿಗೆ 3+1 ವರ್ಷ ಅವಧಿಯ ಡಿಪ್ಲೋಮಾ ಕೋರ್ಸ್‌ಗಳಾದ ಡಿಪ್ಲೋಮಾ ಇನ್ ಟೂಲ್ ಆ್ಯಂಡ್ ಡೈ ಮೇಕಿಂಗ್, ಡಿಪ್ಲೋಮಾ ಇನ್ ಮೆಕ್ಯಾಟ್ರಾನಿಕ್ಸ್ ಹಾಗೂ ಡಿಪ್ಲೋಮಾ ಇನ್ ಎಲೆಕ್ಟ್ರಾನಿಕ್ಸ್ - ಕಮ್ಯೂನಿಕೇಶನ್ ಕೋರ್ಸ್‌ಗಳಿಗೆ ಮೆರಿಟ್ ಕಮ್ ರೋಸ್ಟರ್‌ಆಧಾರದ ಮೇಲೆ ಪ್ರಥಮ ಸೆಮಿಸ್ಟರ್ ಪ್ರವೇಶಕ್ಕೆ ಅವಕಾಶ ಕಲ್ಪಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು http://gttc&hrms.karnataka.gov.in/admission ಮೂಲಕ ಮೇ 10 ರೊಳಗಾಗಿ ಆನ್‌ಲೈನ್ ಅರ್ಜಿ ಸಲ್ಲಿಸಬಹುದು. ಜೊತೆಗೆ, ಸರಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ, ಗದಗ ರಸ್ತೆ, ದದೇಗಲ್, ಕೊಪ್ಪಳ ಇಲ್ಲಿ ಖುದ್ದಾಗಿ ಭೇಟಿ ನೀಡಿ ಸಹ ಮಾಹಿತಿಯನ್ನು ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ಕಾರ್ಯಾಲಯ ಅಥವಾ ಮೌನೇಶ್ ರಾಥೋಡ್, ವಿಭಾಗದ ಮುಖ್ಯಸ್ಥರು, ಜಿಟಿಟಿಸಿ ದದೇಗಲ್, ಕೊಪ್ಪಳ ಅವರನ್ನು ದೂರವಾಣಿ ಸಂಖ್ಯೆ 7507094445, 9986088894 ಸಂಪರ್ಕಿಸಬಹುದು ಎಂದು ಜಿಟಿಟಿಸಿ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಕನಕಗಿರಿ ಪಟ್ಟಣದ ಬಸ್ ನಿಲ್ದಾಣದಲ್ಲಿ ಬೆಂಗಳೂರಿನ ನಂದಾದೀಪ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಬೇಸಿಗೆ ಹಿನ್ನೆಲೆ ತಿಂಗಳ ಪರ್ಯಂತ ತಂಪಾದ ಶುದ್ಧ ಕುಡಿಯುವ ನೀರು ಹಾಗೂ ಬೆಲ್ಲ ವಿತರಣಾ ಕಾರ್ಯಕ್ಕೆ ನೀರಗಂಟಿ ಕಲ್ಯಾಣಪ್ಪ ಚಾಲನೆ ನೀಡಿದರು.



ಕುಷ್ಟಗಿ ಪಟ್ಟಣದ ಮಾಜಿ ಸಚಿವ ಅಮರೇಗೌಡ ಪಾಟೀಲ ಬಯ್ಯಾಪೂರ ಅವರ ನಿವಾಸದಲ್ಲಿ ಸಹಕಾರಿ ಕ್ಷೇತ್ರದಲ್ಲಿ ಬುಡ್ನೇಸಾಬ ಕಲಾದಗಿ, ಸಮಾಜಸೇವೆ ಕ್ಷೇತ್ರದಲ್ಲಿ ಸುರೇಶಗೌಡ ಕುಂಟನಗೌಡರ ಅವರಿಗೆ ಅಭಿನವ ಗವಿಶ್ರೀ ಪ್ರಶಸ್ತಿಯನ್ನು ಮಾಜಿ ಸಚಿವ ಅಮರೇಗೌಡ ಪಾಟೀಲ ಬಯ್ಯಾಪೂರ ವಿತರಿಸಿದರು.

ಮುದ್ರಾ; ಕೈಮಗ್ಗ ನೇಕಾರರಿಗೆ ಸಾಲದ ನೆರವಿಗೆ ಅರ್ಜಿ

• **ಕನ್ನಡಪ್ರಭ ವಾರ್ತೆ** ಕೊಪ್ಪಳ

ಕೈಮಗ್ಗ ಮತ್ತು ಜವಳಿ ಇಲಾಖೆ ವತಿಯಿಂದ 2026-27ನೇ ಸಾಲಿನ ಮುದ್ರಾ ಯೋಜನೆಯಡಿ ಜಿಲ್ಲೆಯ ಕೈಮಗ್ಗ ನೇಕಾರರಿಗೆ ಬ್ಯಾಂಕ್‌ನಿಂದ ಸಾಲದ ನೆರವನ್ನು ಪಡೆದುಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ.

2026-27ನೇ ಸಾಲಿನ ಮುದ್ರಾ ಯೋಜನೆಯಡಿ ಕೈಮಗ್ಗ ನೇಕಾರರಿಗೆ ಮಗ್ಗ ಖರೀದಿಸಲು ಅಥವಾ ದುಡಿಮೆ ಬಂಡವಾಳಕ್ಕಾಗಿ ರಾಷ್ಟ್ರೀಕೃತ ಬ್ಯಾಂಕ್‌ನಿಂದ ಸಾಲ ಪಡೆಯಲು ಕೊಪ್ಪಳ ಜಿಲ್ಲೆಗೆ 3 ಗುರಿ ನಿಗದಿಪಡಿಸಲಾಗಿದೆ. ಪ್ರತಿ ಫಲಾನುಭವಿಗೆ ₹50,000 ರಂತೆ 20% ಮಾರ್ಜಿನ್ ಮನಿ ಪಡೆಯಲು ಅವಕಾಶವಿರುತ್ತದೆ. ಅರ್ಜಿ ಸಲ್ಲಿಸುವ ಮೇ 20 ಕೊನೆಯ ದಿನವಾಗಿದ್ದು, ಆಸಕ್ತರು ಯಾವುದೇ ಮಧ್ಯವರ್ತಿಗಳನ್ನು ಸಂಪರ್ಕಿಸದೆ ನೇರವಾಗಿ ಉಪ ನಿರ್ದೇಶಕರ ಕಛೇರಿ, ಕೈಮಗ್ಗ ಮತ್ತು ಜವಳಿ ಇಲಾಖೆ, ಅಶೋಕ ಸರ್ಕಲ್ ಹತ್ತಿರ ಕೊಪ್ಪಳ, ದೂರವಾಣಿ ಸಂಖ್ಯೆ:08539-295469 ಗೆ ಸಂಪರ್ಕಿಸಬಹುದು ಎಂದು ಕೊಪ್ಪಳ ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಫುಟ್ಪಾತ್ ಮೇಲಿನ ಅಂಗಡಿ ತೆರವಿಗೆ ವ್ಯಾಪಕ ಪ್ರಶಂಸೆ

ಅಕ್ರಮವಾಗಿ ನಿರ್ಮಿಸಿದ್ದ ಅಂಗಡಿಗಳ ತೆರವು ಮಾಡಿದ ನಗರಸಭೆ



ಗಂಗಾವತಿ ಕೋರ್ಟ್ ಎದುರಿಗೆ ಇರುವ ರಸ್ತೆಯ ಪಕ್ಕದಲ್ಲಿರುವ ಚರಂಡಿ ಮೇಲೆ ನಿರ್ಮಿಸಿಕೊಂಡಿರುವ ಕಟ್ಟಡಗಳನ್ನು ತೆರವು ಮಾಡಲಾಯಿತು.

• **ರಾಮಮೂರ್ತಿ ನವಲಿ**
ಕನ್ನಡಪ್ರಭ ವಾರ್ತೆ ಗಂಗಾವತಿ

ಹಲವಾರು ವರ್ಷಗಳಿಂದ ನಗರದ ಫುಟ್ಪಾತ್ ಮೇಲೆ ಅನಧಿಕೃತವಾಗಿ ನಿರ್ಮಿಸಿಕೊಂಡಿರುವ ಅಂಗಡಿ, ಹೋಟೆಲ್‌ಸೇರಿದಂತೆಬಂಡಿಗಳತೆರವುಕಾರ್ಯಾಚರಣೆ ಮುಂದುವರಿದಿದೆ. ಈ ಕಾರ್ಯಾಚರಣೆಗೆ ಸಾರ್ವಜನಿಕರಿಂದ ವ್ಯಾಪಕ ಪ್ರಶಂಸೆ ವ್ಯಕ್ತವಾಗಿದೆ.

ಒಂದು ವಾರದಿಂದ ಕಾರ್ಯಾಚರಣೆ ನಡೆದಿದ್ದು, ಪ್ರಮುಖವಾಗಿ ಗಾಂಧಿ ವೃತ್ತ, ಮಹಾವೀರ ವೃತ್ತದ ರಸ್ತೆ, ಪಂಪಾನಗರ, ಶ್ರೀಚನ್ನಬಸವಸ್ವಾಮಿ ವೃತ್ತದ ರಸ್ತೆ, ಬಸವಣ್ಣ ವೃತ್ತ, ಬಸ್ ನಿಲ್ದಾಣ ರಸ್ತೆ, ಜುಲೈ ನಗರ ಸೇರಿದಂತೆ ವಿವಿಧ ರಸ್ತೆಗಳ ಪಕ್ಕದಲ್ಲಿ ಅನಧಿಕೃತವಾಗಿ ನಿರ್ಮಿಸಿಕೊಂಡಿರುವ ಹೋಟೆಲ್‌ಗಳನ್ನು ತೆರವುಗೊಳಿಸಲಾಗಿದೆ.

ಕೆಲವರು ರಸ್ತೆಯ ಪಕ್ಕದಲ್ಲಿರುವ ಚರಂಡಿ ಮೇಲೆ ನಿರ್ಮಿಸಿರುವ ಫುಟ್ಪಾತ್ ಮೇಲೆ ಅಂಗಡಿಗಳನ್ನು ನಿರ್ಮಿಸಿಕೊಂಡಿದ್ದರು. ಸೂಚನೆ ನೀಡಿದರೂ ಸ್ವಯಂ ಪ್ರೇರಿತರಾಗಿ ತೆರವುಗೊಳಿಸಲು ನಿರ್ಲಕ್ಷ್ಯ ಮಾಡಿದ್ದರಿಂದ ನಗರಸಭೆಯ ಸಿಬ್ಬಂದಿ ಜೆಸಿಬಿ ಮೂಲಕ ತೆರವುಗೊಳಿಸಿದ್ದಾರೆ.

ಸಂಚಾರಕ್ಕೆ ಅಡ್ಡಿ: ವೃದ್ಧರು ಮತ್ತು ಮಹಿಳೆಯರು ಸೇರಿದಂತೆ ಮಕ್ಕಳು ಸುಗಮವಾಗಿ ಸಂಚರಿಸುವುದಕ್ಕಾಗಿ ನಗರಸಭೆಯವರು ಅಮೃತಸಿಟಿ ಯೋಜನೆಯಲ್ಲಿ ಕೋಟ್ಯಾಂತ ವೆಚ್ಚ ಮಾಡಿ ಫುಟ್ಪಾತ್ ಗಳನ್ನು ನಿರ್ಮಿಸಿದ್ದರು. ಇದರ ಮೇಲೆ ಕೆಲವರು ಅಂಗಡಿಗಳನ್ನು ನಿರ್ಮಿಸಿಕೊಂಡಿದ್ದರು. ಹೀಗಾಗಿ, ವಾಹನಗಳ ಸಂಚಾರಕ್ಕೂ ಅಡ್ಡಿ ಉಂಟಾಗಿತ್ತು.

ಸೌಂದರ್ಯೀಕರಣಕ್ಕೆ ಒತ್ತು: ನಗರದಲ್ಲಿ ಸುಗಮ ಸಂಚಾರ, ಪಾದಾಚಾರಿಗಳಿಗೆ ಅನುಕೂಲ ಜೊತೆಗೆ ನಗರ ಸುಂದರವಾಗಿರಬೇಕು ಎಂದು ನಗರಸಭೆಯವರು ಕ್ರಮ ಕೈಗೊಂಡಿದ್ದಾರೆ. ರಸ್ತೆ ಮಧ್ಯದಲ್ಲಿ ವಿದ್ಯುತ್ ದೀಪಗಳ ಕಂಬಗಳು, ಮಳೆ ನೀರು ಸುಗಮವಾಗಿ ಚರಂಡಿ ಸೇರುವಂತೆ ಕ್ರಮ ಕೈಗೊಂಡಿದ್ದು, ಇದಕ್ಕೆ ನಾಗರಿಕರು ಪ್ರಶಂಸೆ ವ್ಯಕ್ತಪಡಿಸಿದ್ದಾರೆ. ಕೂಡಲೆ ಫುಟ್ಪಾತ್ ದುರಸ್ಥಿ ಕಾರ್ಯಕ್ಕೆಗೊಳ್ಳುವಂತೆ ಒತ್ತಾಯಿಸಿದ್ದಾರೆ.

ಗುಂಡಮ್ಮ ಕ್ಯಾಂಪ್‌ನಲ್ಲಿ ಅವಕಾಶ: ಬೀದಿ ವ್ಯಾಪಾರಿಗಳಿಗೆಫುಟ್ಪಾತತೆರವುಕಾರ್ಯಾಚರಣೆಯಿಂದ ತೊಂದರೆಯಾಗದಿರಲಿ ಎಂದು ನಗರಸಭೆಯವರು ಗುಂಡಮ್ಮ ಕ್ಯಾಂಪ್ ನಲ್ಲಿ ತರಕಾರಿ ಮಾರುಕಟ್ಟೆ ನಿರ್ಮಿಸಿದ್ದು, ಅಲ್ಲಿ ವ್ಯಾಪಾರ ಮಾಡುವಂತೆ ಸೂಚನೆ ನೀಡಿದ್ದಾರೆ.

> **ಗಂಗಾವತಿ ನಗರದ ಕೆಲ ರಸ್ತೆಗಳ ಪಕ್ಕದಲ್ಲಿರುವ ಫುಟ್ಪಾತ್ ಮೇಲೆ ಇರುವ ಅನಧಿಕೃತ ಅಂಗಡಿಗಳನ್ನು ತೆರವುಗೊಳಿಸಿದೆ. ಈಗಾಗಲೇ ಸೂಚನೆ ನೀಡಿದ್ದರೂ ತೆರವುಗೊಳಿಸಿಕೊಳ್ಳದೆ ನಿರ್ಲಕ್ಷ್ಯ ವಹಿಸಿದ್ದಾರೆ. ತರಕಾರಿ ವ್ಯಾಪಾರಿಗಳು, ಬೀದಿ ಬದಿಯ ವ್ಯಾಪಾರಿಗಳಿಗೆ ಗುಂಡಮ್ಮ ಕ್ಯಾಂಪ್ ಬಳಿ ನಿರ್ಮಿಸಿರುವ ಮಾರುಕಟ್ಟೆಗೆ ಹೋಗುವಂತೆ ಸೂಚನೆ ನೀಡಿದೆ. ಸಾರ್ವಜನಿಕರ ಹಿತ ದೃಷ್ಟಿ ಮತ್ತು ನಗರ ಸೌಂದರೀಕರಣಕ್ಕೆ ಒತ್ತು ನೀಡಲಾಗಿದೆ.**
> • **ವಿರೂಪಾಕ್ಷಮೂರ್ತಿ** ಪೌರಾಯುಕ್ತರು, ನಗರಸಭೆ

> **ನಗರದಲ್ಲಿ ಅನಧಿಕೃತ ಅಂಗಡಿಗಳ ತೆರವು ಕಾರ್ಯವನ್ನು ಸ್ವಾಗತಿಸುತ್ತೇವೆ. ನಗರ ಸೌಂದರೀಕರಣಕ್ಕೆ ಆದ್ಯತೆ ನೀಡಿರುವದು ಪ್ರಶಂಸನೀಯ. ಬೀದಿ ವ್ಯಾಪಾರಿಗಳು ಅನಾಥರಾಗವುದಕ್ಕೂ ಪೂರ್ವದಲ್ಲಿ ಅವರಿಗೆ ಸ್ಥಳಾವಕಾಶ ಕಲ್ಪಿಸಬೇಕು.**
> • **ಗಂಗಪ್ಪ** ಗಂಗಾವತಿ ನಿವಾಸಿ

> **ಬೀದಿ ಬದಿಯ ಅಂಗಡಿಗಳನ್ನು ತೆರವುಗೊಳಿಸಿದ್ದರಿಂದ ಬೀದಿ ಪಾಲಾಗಿದ್ದೇವೆ. ದಿನನಿತ್ಯ ಬಂಡಿಯಲ್ಲಿ ಸಣ್ಣ ಪುಟ್ಟ ವ್ಯಾಪಾರ ಮಾಡಿ ಜೀವನ ಸಾಗಿಸುತ್ತೇವೆ. ಬದುಕಲು ಅವಕಾಶ ನೀಡಿ**
> • **ಗುಂಡಪ್ಪ** ಬೀದಿ ವ್ಯಾಪಾರಿ

ಫಲಾನುಭವಿಗಳಿಗೆ ಗ್ಯಾರಂಟಿ ಯೋಜನೆ ಸವಲತ್ತು ತಲುಪಲಿ

ಸಭೆಯಲ್ಲಿ ಅಧ್ಯಕ್ಷ ಬಾಲಚಂದ್ರನ್ ಎಸ್. ಹೇಳಿಕೆ



ಕೊಪ್ಪಳ ನಗರದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ತಾಲೂಕು ಮಟ್ಟದ ಅನುಷ್ಠಾನ ಸಮಿತಿಯ ಪ್ರಗತಿ ಪರಿಶೀಲನಾ ಸಭೆ ಜರುಗಿತು.

• **ಕನ್ನಡಪ್ರಭ ವಾರ್ತೆ** ಕೊಪ್ಪಳ

ಪ್ರತಿಯೊಬ್ಬ ಫಲಾನುಭವಿಗಳಿಗೆ ಗ್ಯಾರಂಟಿ ಯೋಜನೆಗಳ ಸವಲತ್ತುಗಳು ತಲುಪಲಿ ಎಂದು ತಾಲೂಕು ಗ್ಯಾರಂಟಿ ಯೋಜನೆಯ ಅನುಷ್ಠಾನ ಸಮಿತಿ ತಾಲೂಕಾಧ್ಯಕ್ಷ ಬಾಲಚಂದ್ರನ್ ಎಸ್. ಹೇಳಿದರು.

ನಗರದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಜರುಗಿದ ತಾಲೂಕು ಮಟ್ಟದ ಅನುಷ್ಠಾನ ಸಮಿತಿಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಗ್ಯಾರಂಟಿ ಯೋಜನೆಯ ಸವಲತ್ತು ಎಲ್ಲರಿಗೂ ತಲುಪಿಸಬೇಕು. ಯುವ ನಿಧಿ ಸೌಲಭ್ಯ ಕುರಿತು ಇಲಾಖಾ ವತಿಯಿಂದ ಹೆಚ್ಚಿನ ಪ್ರಮಾಣದಲ್ಲಿ ಪ್ರಚಾರ ಕೈಗೊಂಡು ನಿರುದ್ಯೋಗ ಯುವಕರು ಯುವ ನಿಧಿ ಸೌಲಭ್ಯ ಹೆಚ್ಚಿನ ಪ್ರಮಾಣದಲ್ಲಿ ಪಡೆಯುವಂತೆ ಇಲಾಖಾಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಗೃಹಲಕ್ಷ್ಮಿ ಫಲಾನುಭವಿಗಳಿಗೆ ಜನವರಿ-2026ರ ವರೆಗೆ ಅನುದಾನ ಜಮೆಯಾಗಿರುವ ಕುರಿತು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖಾಧಿಕಾರಿಗಳು ಸಭೆಯಲ್ಲಿಗಮನಕ್ಕೆತಂದರು. ನಿಯಂತ್ರಣ ಫಲಕದಲ್ಲಿ ಮಾಹಿತಿಯು ಅಪ್‌ಡೇಟ್ ಆಗಿಲ್ಲ ಎಂದು ಸಭೆಗೆ ತಿಳಿಸಿದರು.

ಐಟಿ, ಜಿಎಸ್‌ಟಿ ನೋಂದಣಿಯಾದ ಫಲಾನುಭವಿಗಳು ಸೌಲಭ್ಯ ಪಡೆಯಲು ಅನರ್ಹರಾಗಿರುತ್ತಾರೆ. ಒಮ್ಮೆ ನೋಂದಣಿಯಾದಲ್ಲಿ ಸೌಲಭ್ಯ ದೊರೆಯುವದಿಲ್ಲಎಂದರು.ಇದುರಾಜ್ಯಮಟ್ಟದ ಸಮಸ್ಯೆಯಾಗಿರುವದರಿಂದ ಮುಖ್ಯಮಂತ್ರಿಗಳ ಗಮನಕ್ಕೆ ಇದೆ. ಇದನ್ನು ಮತ್ತೊಮ್ಮೆ ಜಿಲ್ಲಾ ಮಟ್ಟದ ಸಭೆಯ ಮೂಲಕ ರಾಜ್ಯಮಟ್ಟದ ಸಭೆಯ ಗಮನಕ್ಕೆ ತರಲಾಗುವದು ಎಂದು ಅಧ್ಯಕ್ಷ ಬಾಲಚಂದ್ರನ್ ಎಸ್ ತಿಳಿಸಿದರು.

ಸದಸ್ಯರಾದ ಜ್ಯೋತಿ ಗೊಂಡಬಾಳ ಮಾತನಾಡಿ, ಮುಂಡರಗಿ ಫಲಾನುಭವಿಯೊಬ್ಬರಿಗೆ ಸೂಕ್ತ ದಾಖಲೆಗಳು ಇಲ್ಲದ ಪ್ರಯುಕ್ತ ಇದು ವರೆಗೆ ಅನುದಾನ ಬಂದಿಲ್ಲ. ಈ ಬಗ್ಗೆ ಕ್ರಮವಹಿಸುವಂತೆ ಅಧಿಕಾರಿಗಳಿಗೆ ವಿವರಿಸಿದರು. ಅಧ್ಯಕ್ಷರು ಮಾತನಾಡಿ ಗೃಹಲಕ್ಷ್ಮಿ ಯೋಜನೆಯ ಫಲಾನುಭವಿ ಮರಣ ಹೊಂದಿದಲ್ಲಿ ಅವರ ಖಾತೆಗೆ ಅನುದಾನ ಜಮೆಯಾಗುತ್ತದೆ. ಈ ಬಗ್ಗೆ ಅಂಗನವಾಡಿ ಕಾರ್ಯಕರ್ತೆಯರ ಮೂಲಕ ಫಲಾನುಭವಿ ಮರಣ ಹೊಂದಿದ ಬಗ್ಗೆ ಗ್ರಾಮ ಪಂಚಾಯಿತಿಗೆ ಮಾಹಿತಿ ನೀಡಿ ವಿವರ ಸಲ್ಲಿಸಲು ಅಧಿಕಾರಿಗಳಿಗೆ ಸೂಚಿಸಿದರು. ಗೃಹಜ್ಯೋತಿ ಯೋಜನೆಯ ಫಲಾನುಭವಿ ವಿವರವನ್ನು ಗ್ರಾಪಂವಾರು ಮಾಹಿತಿ ಸಲ್ಲಿಸುವಂತೆ ಅಧ್ಯಕ್ಷರು ಜೆಸ್ಕಾಂಗೆ ಸೂಚಿಸಿದರು.

ಸದಸ್ಯರಾದ ದೇವರಾಜ ನಡುವಿನಮನಿ ಮಾತನಾಡಿ, ಕೊಪ್ಪಳ ನಗರದ 26ನೇ ವಾರ್ಡಿನ ಹೇಮರಡ್ಡಿ ಮಲ್ಲಮ್ಮನ ಗುಡಿ ಜಂಗಲ್ ಕಟಿಂಗ್,11 ಕೆವಿ ಮಾರ್ಗ ಬದಲಾವಣೆ ಮಾಡುವಂತೆ ಅಧಿಕಾರಿಗಳಿಗೆ ತಿಳಿಸಿದರು. ಬಾಡಿಗೆಮನೆಯಲ್ಲಿವಾಸಿಸುವ ಫಲಾನುಭವಿಗಳು ಅದನ್ನು ಬಿಟ್ಟು ಹೋದಲ್ಲಿ ಡಿ-ಲಿಂಕ್ ಮೂಲಕ ಬದಲಾವಣೆ ಮಾಡಿಕೊಳ್ಳಲು ಅವಕಾಶ ಇದೆ. ಈ ಹಿಂದೆ ಭಾಗ್ಯಜ್ಯೋತಿ, ಕುಟೀರ ಜ್ಯೋತಿ ಯೋಜನೆಯನ್ನು ರದ್ದುಪಡಿಸಿ ಎಲ್‌ಟಿ-1 ಯೋಜನೆ ಮಾಡಲಾಗಿದೆ ಎಂದು ಜೆಸ್ಕಾಂ ಅಧಿಕಾರಿಗಳು ತಿಳಿಸಿದರು.

ಸದಸ್ಯರಾದಮಾನ್ವಿಪಾಶಾಮಾತನಾಡಿ, ಮಳೆಗಾಲ ಪ್ರಾರಂಭವಾಗುತ್ತಿರುವುದರಿಂದ ಮುಂಜಾಗ್ರತಾ ಕ್ರಮವಾಗಿ ವಿದ್ಯುತ್ ಮಾರ್ಗದಲ್ಲಿ ಜಂಗಲ್ ಕಟಿಂಗ್ ಹಾಗೂ ಇನ್ನಿತರ ದುರಸ್ಥಿ ಕಾರ್ಯನಿರ್ವಹಿಸಬೇಕು ಎಂದು ಜೆಸ್ಕಾಂಗೆ ತಿಳಿಸಿದರು.

ಸದಸ್ಯರಾದ ಜ್ಯೋತಿ ಗೊಂಡಬಾಳ ಮಾತನಾಡಿ, ಪಡಿತರ ಧಾನ್ಯ ಕಳ್ಳ ಸಾಗಾಣಿಕೆ ಮಾಡಿದ ಬಗ್ಗೆ ಮಾಧ್ಯಮದಲ್ಲಿ ಬರುವ ಮೊದಲು ಇಲಾಖಾಧಿಕಾರಿಗಳು ಈ ಕುರಿತು ನಿಗಾವಹಿಸಬೇಕು ಎಂದರು. ಮುಂದಿನ ಸಭೆಯಲ್ಲಿ 7 ಗ್ಯಾಸ್ ಏಜೆನ್ಸಿ ಮಾಲೀಕರು ಹಾಜರಿರುವಂತೆ ತಿಳಿಸಿದರು.

ಘಟಕ ವ್ಯವಸ್ಥಾಪಕರು ಮಾತನಾಡಿ, ಕೊಪ್ಪಳದಿಂದ ಬೀದರ್ ಗೆ ಪ್ರಯಾಣಿಸಲು ಸ್ಲೀಪರ್ ಕೋಚ್ ವಾಹನವನ್ನು ಪ್ರಾರಂಭಿಸಲಾಗಿದೆ ಎಂದು ಸಭೆಗೆ ವಿವರಿಸಿದರು.

ಸದಸ್ಯರಾದ ಜ್ಯೋತಿ ಗೊಂಡಬಾಳ ಮಾತನಾಡಿದರು.ತಾಲೂಕ ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ತಹಸೀಲ್ದಾರ್‌ಬಸವರಾಜ ತೆನ್ನಳ್ಳಿ, ಅನುಷ್ಠಾನ ಸಮಿತಿ ಸದಸ್ಯರಾದ ದೇವರಾಜ ನಡುವಿನಮನಿ, ಜ್ಯೋತಿ ಗೊಂಡಬಾಳ, ಅನ್ವರ್ ಹುಸೇನ ಗಡಾದ, ಮಾನ್ವಿ ಪಾಶಾ, ಅನ್ನದಾನಯ್ಯಸ್ವಾಮಿ, ರಾಮಣ್ಣ ಚೌಡ್ಕಿ ಪಂಚ ಗ್ಯಾರಂಟಿ ಯೋಜನೆಗಳ ಇಲಾಖಾಧಿಕಾರಿಗಳು, ತಾಲೂಕ ಪಂಚಾಯಿತಿ ಸಿಬ್ಬಂದಿ ಇದ್ದರು.

ಬಾಲಕಿಯರು ನಾಯಕತ್ವ ಗುಣ ಬೆಳೆಸಿಕೊಳ್ಳಿ: ಮಾಳೆಕೊಪ್ಪ



ಹದಿಹರೆಯದ ಬಾಲಕಿಯರಿಗೆ ನಾಯಕತ್ವ ಹಾಗೂ ಸಂವಹನ ಕೌಶಲ್ಯ ತರಬೇತಿ ಕಾರ್ಯಕ್ರಮ ಜರುಗಿತು.

• **ಕನ್ನಡಪ್ರಭ ವಾರ್ತೆ** ಕುಕನೂರು

ಬಾಲಕಿಯರು ಬಾಲ್ಯದಿಂದಲೇ ನಾಯಕತ್ವ ಗುಣ ಬೆಳೆಸಿಕೊಳ್ಳಬೇಕು ಎಂದು ಸಿಡಿಪಿಒ ಬೆಟದಪ್ಪ ಮಾಳೆಕೊಪ್ಪ ಹೇಳಿದರು.

ತಾಲೂಕಿನ ತಳಕಲ್ಲ, ಕುದರಿಮೋತಿ ಗ್ರಾಮದಲ್ಲಿ ಕೆಎಚ್ ಪಿಟಿ ಸಂಸ್ಥೆಯಿಂದ ಜರುಗಿದ ಹದಿಹರೆಯದ ಬಾಲಕಿಯರಿಗೆ ನಾಯಕತ್ವ ಹಾಗೂ ಸಂವಹನ ಕೌಶಲ್ಯ ತರಬೇತಿ ಕಾರ್ಯಕ್ರಮವನ್ನುದ್ದೇಶಿಸಿ ಮಾತ ನಾಡಿದರು.

ಬಾಲಕಿಯರು ಎಲ್ಲ ರಂಗದಲ್ಲೂ ತೊಡಗಿಸಿಕೊಳ್ಳಬೇಕು. ಹಿಂಜರಿಕೆ ಇರಬಾರದು. ಉನ್ನತ ವ್ಯಾಸಂಗದಿಂದ ಸಹ ವಂಚಿತರಾಗಬಾರದು. ಸಮಾಜದಲ್ಲಿ ಒಂದಿಲ್ಲ ಒಂದು ರಂಗದಲ್ಲಿ ಸಾಧನೆ ಮಾಡುವ ಹಂಬಲ ಹೊಂದಬೇಕು. ಕೌಶಲ್ಯಾಧಾರಿತವಾಗಿ ಬೆಳೆಯಬೇಕು ಎಂದರು. ಸರ್ಕಾರ ಸಹ ಹೆಣ್ಣು ಮಕ್ಕಳ ಉತ್ತೇಜನಕ್ಕಾಗಿ ಹಲವಾರು ಶೈಕ್ಷಣಿಕ ಸೌಲಭ್ಯಗಳನ್ನು ಒದಗಿಸಿದೆ. ಅವುಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಅಲ್ಲದೆ ವೃತ್ತಿಪರ ಅನೇಕ ಯೋಜನೆಗಳಲ್ಲೂ ಮಹಿಳೆಯರಿಗೆ ಆದ್ಯತೆ ನೀಡಲಾಗುತ್ತಿದೆ. ಹೆಣ್ಣು ಅಬಲೆಯಲ್ಲಾ, ಸಬಲೆ ಎಂಬುದನ್ನು ಸಮಾಜಕ್ಕೆ ತೋರಿಸಬೇಕು. ಬಾಲಕಿಯರು ತಮ್ಮ ಶಾಲಾ ದಿನಗಳಲ್ಲಿ ಸದೃಢತೆಯಿಂದ ಅಭ್ಯಾಸ ಮಾಡಬೇಕು ಎಂದರು. ಸಂಸ್ಥೆಯ ಆಡಳಿತಾಧಿಕಾರಿ ಉಮಾ ಹಾಗೂ ತಾಲೂಕು ಸಂಯೋಜಿಕ ಪುಂಡಲೀಕ್ ಇತರರಿದ್ದರು.

ಕಾನೂನು ಅರಿವು ನೆರವು | **ಹಿರಿಯ ಸಿವಿಲ್ ನ್ಯಾಯಾಧೀಶ ಮಹಾಂತೇಶ ಎಸ್. ದರಗದ ಹೇಳಿಕೆ**

ಕಾರ್ಮಿಕ ದಿನವನ್ನು ಶ್ರಮಯೋಗಿ ದಿನವೆಂಬುದು ಸೂಕ್ತ

• **ಕನ್ನಡಪ್ರಭ ವಾರ್ತೆ** ಕೊಪ್ಪಳ

ಅಂತಾರಾಷ್ಟ್ರೀಯ ಕಾರ್ಮಿಕ ದಿನ ಎನ್ನುವ ಬದಲು ಶ್ರಮಯೋಗಿ ದಿನ ಎಂದು ಕರೆಯುವುದು ಹೆಚ್ಚು ಸೂಕ್ತ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾಂತೇಶ ಎಸ್. ದರಗದ ಹೇಳಿದರು.

ತಾಲೂಕಿನ ಹೂವಿನಾಳ ಗ್ರಾಮದ ಶ್ರೀ ಆಂಜನೇಯ ದೇವಸ್ಥಾನದಲ್ಲಿ ಅಂತಾರಾಷ್ಟ್ರೀಯ ಕಾರ್ಮಿಕ ದಿನಾಚರಣೆಯ ಅಂಗವಾಗಿ ಇತ್ತೀಚೆಗೆ ಜರುಗಿದ ಕಾನೂನು ಅರಿವು ನೆರವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಅಂತಾರಾಷ್ಟ್ರೀಯ ಕಾರ್ಮಿಕ ದಿನ ಎನ್ನುವ ಬದಲು ಶ್ರಮಯೋಗಿ ದಿನ ಎಂದು ಕರೆಯುವುದು ಹೆಚ್ಚು ಸೂಕ್ತ. ಬಸವಣ್ಣನವರು ಕಾಯಕವೇ ಕೈಲಾಸ ಎಂದು ನುಡಿದು ಕಾಯಕದ ಮಹತ್ವವನ್ನು ಸಾರಿದ್ದಾರೆ. ಅದೇ ರೀತಿ ನೀನು ಅಧ್ಯಕ್ಷನಾಗಿರು, ಚಮ್ಮಾರನಾಗಿರು, ಕಮ್ಮಾರನಾಗಿರು, ಏನೇ ಆಗಿದ್ದರೂ ಮೊದಲು ಶ್ರಮಯೋಗಿ ಆಗಿ ಕೆಲಸಗಾರನಾಗು, ಕಾರ್ಮಿಕನಾಗಿರು ಎಂದು ಡಾ. ಬಿ.ಆರ್. ಅಂಬೇಡ್ಕರ್ ಹೇಳಿದ್ದಾರೆ. ಶ್ರಮಿಕವರ್ಗ ದೇಶದ ಅಭಿವೃದ್ಧಿ, ಉನ್ನತಿಗೆ ಮುನ್ನುಡಿಯಾಗಿದ್ದಾರೆ ಎಂದರು.



ಕೊಪ್ಪಳ ತಾಲೂಕಿನ ಹೂವಿನಾಳ ಗ್ರಾಮದ ಶ್ರೀ ಆಂಜನೇಯ ದೇವಸ್ಥಾನದಲ್ಲಿ ಅಂತಾರಾಷ್ಟ್ರೀಯ ಕಾರ್ಮಿಕ ದಿನಾಚರಣೆಯ ಅಂಗವಾಗಿ ಇತ್ತೀಚೆಗೆ ಕಾನೂನು ಅರಿವು ನೆರವು ಕಾರ್ಯಕ್ರಮ ಜರುಗಿತು.

> **ಅಂತಾರಾಷ್ಟ್ರೀಯ ಕಾರ್ಮಿಕ ದಿನ ಎನ್ನುವ ಬದಲು ಶ್ರಮಯೋಗಿ ದಿನ ಎಂದು ಕರೆಯುವುದು ಹೆಚ್ಚು ಸೂಕ್ತ.**
> • **ಮಹಾಂತೇಶ ಎಸ್. ದರಗದ** ಸಿವಿಲ್ ನ್ಯಾಯಾಧೀಶರು

ಕಲ್ಯಾಣ ಕರ್ನಾಟಕ ಜಿಲ್ಲೆಗಳ ನೋಂದಾಯಿತ ಕಾರ್ಮಿಕ ಸಂಘಗಳ ಒಕ್ಕೂಟ ಅಧ್ಯಕ್ಷ ರಮೇಶ ಘೋರ್ಪಡೆ ಮಾತನಾಡಿ, ಕಾರ್ಮಿಕ ಇಲಾಖೆಯಿಂದ ನಮ್ಮ ಕಾರ್ಮಿಕರಿಗೆ ಒಳ್ಳೆಯ ಸೌಲಭ್ಯಗಳನ್ನು ನೀಡಲಾಗುತ್ತಿದೆ. ಇದರಿಂದ ನಮ್ಮ ಕಾರ್ಮಿಕರು ಉತ್ತಮ ಜೀವನ ಕಟ್ಟಿಕೊಳ್ಳಲು ಕಟ್ಟಡ ನಿರ್ಮಾಣ ಕಾರ್ಮಿಕರಿಗೆ ಜೀವನ ಮಟ್ಟವನ್ನುಸುಧಾರಿಸಿಕೊಳ್ಳಲುಸಾಧ್ಯವಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾರ್ಮಿಕ ನಿರೀಕ್ಷಕರಾದ ಮಂಜುಳಾ ವಿಶ್ವನಾಥ ಮಾತನಾಡಿ, ಪಾಶ್ಚಿಮಾತ್ಯ ದೇಶಗಳಲ್ಲಿಕಾರ್ಮಿಕರದಂಗೆಗಳು1883ರಲ್ಲಿ ಪ್ರಾರಂಭವಾದವು. ಚಿಕಾಗೋದಲ್ಲಿ ಕಾರ್ಮಿಕ ಸಂಘಟನೆಗಳು ಕೆಲಸದ ಅವಧಿ ನಿರ್ಧರಿಸುವ ಸಲುವಾಗಿ ಮತ್ತು ಅನೇಕ ಶೋಷಣೆಗಳ ವಿರುದ್ಧ ಹೋರಾಟ ಪ್ರಾರಂಭಿಸಿದವು. ಎಂದರು.

ಜಿಲ್ಲಾ ಬಾಲಕಾರ್ಮಿಕ ಯೋಜನಾ ನಿರ್ದೇಶಕ ಬಸವರಾಜ ಹಿರೇಗೌಡ್ರ, ಕಾರ್ಮಿಕ ಇಲಾಖೆಯ ಕ್ಷೇತ್ರ ನಿರ್ವಾಹಕ ಹೇಮಂತ್ ಸಿಂಗ್, ಬಹದ್ದೂರ ಬಂಡಿ ಕಾರ್ಮಿಕ ಸಂಘದ ಅಧ್ಯಕ್ಷ ಮಹಿಬೂಬ ಮಣ್ಣೂರ, ಹೂವಿನಾಳ ಕಟ್ಟಡ ಕಾರ್ಮಿಕ ಸಂಘದ ಅಧ್ಯಕ್ಷ ಇಂದ್ರಾನಾಯಕ ಸೇರಿದಂತೆ ವಿವಿಧ ಸಂಘಟನೆಯ ಪದಾಧಿಕಾರಿಗಳು, ಕಾರ್ಮಿಕರಿದ್ದರು.

ಸಾಧಕರನ್ನು ಗುರುತಿಸುವ ವಿಪಿಕೆ ಫೌಂಡೇಷನ್ ಕಾರ್ಯ ಶ್ಲಾಘನೀಯ

• **ಕನ್ನಡಪ್ರಭ ವಾರ್ತೆ** ಕುಷ್ಟಗಿ

ಎಲೆ ಮರೆಯ ಕಾಯಿಯಂತೆ ಮಾಡುತ್ತಿರುವ ಸೇವೆಯನ್ನು ಗುರುತಿಸುವ ಮೂಲಕ ಪ್ರಶಸ್ತಿ-ಪುರಸ್ಕಾರಗಳನ್ನು ನೀಡುತ್ತಿರುವ ಶ್ರೀ ದಯಾನಂದ ಪುರಿ ಸಂಸ್ಥೆ ಹಾಗೂ ವಿಪಿಕೆ ಫೌಂಡೇಷನ್ ಕಾರ್ಯ ಶ್ಲಾಘನೀಯ ಎಂದು ಮಾಜಿ ಸಚಿವ ಅಮರೇಗೌಡ ಪಾಟೀಲ ಬಯ್ಯಾಪೂರ ಅಭಿಪ್ರಾಯಪಟ್ಟರು.

ಪಟ್ಟಣದ ಮಾಜಿ ಸಚಿವ ಅಮರೇಗೌಡ ಪಾಟೀಲ ಬಯ್ಯಾಪೂರ ಅವರ ನಿವಾಸದಲ್ಲಿ ಸಹಕಾರಿ ಕ್ಷೇತ್ರದಲ್ಲಿ ಬುಡ್ನೇಸಾಬ ಕಲಾದಗಿ, ಸಮಾಜಸೇವೆ ಕ್ಷೇತ್ರದಲ್ಲಿ ಸುರೇಶಗೌಡ ಕುಂಟನಗೌಡರ ಅವರಿಗೆ ಅಭಿನವ ಗವಿಶ್ರೀ ಪ್ರಶಸ್ತಿ ವಿತರಿಸಿ ಮಾತನಾಡಿದರು.

ದೋಟಿಹಾಳ ಗ್ರಾಮದ ಶ್ರೀ ದಯಾನಂದ ಪುರಿ ಸಂಸ್ಥೆ ಹಾಗೂ ವಿಪಿಕೆ ಫೌಂಡೇಷನ್ ಅವರು ಸಮಾಜಸೇವೆ, ಆರೋಗ್ಯ ಜಾಗೃತಿ, ರಕ್ತದಾನ, ನೇತ್ರಚಿಕಿತ್ಸಾ ಶಿಬಿರ ಸೇರಿದಂತೆ ಅನೇಕ ಸಾಮಾಜಿಕ ಸೇವೆಯಲ್ಲಿ ತೊಡಗಿಕೊಳ್ಳುವ ಜೊತೆಗೆ ಸಾಧಕರನ್ನು ಗುರುತಿಸಿ ಪ್ರೋತ್ಸಾಹಿಸುವ ಕಾರ್ಯ ಮಾಡುತ್ತಿರುವುದು ಉತ್ತಮ ಕಾರ್ಯವಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ರಾಜ್ಯೋತ್ಸವ ಪ್ರಶಸ್ತಿ ಪುರಷ್ಕೃತ ಶೇಖರಗೌಡ ಮಾಲಿಪಾಟೀಲ, ಶಿವಶಂಕರಗೌಡ ಪಾಟೀಲ, ಸಾಹಿತಿ ಹನುಮೇಶ ಶೆಟ್ಟರ ಗುಮಗೇರಿ, ವಿಪಿಕೆ ಫೌಂಡೇಷನ್ ಮುಖ್ಯಸ್ಥ ಶ್ರೀನಿವಾಸ ಕಂಟ್ಲಿ, ಮಹಾಂತೇಶ ಅಗಸಿಮುಂದಿನ, ಇಮಾಮಸಾಬ ಗರಡಿಮನಿ, ಮೈಹಿಬುಬು ಮುಲ್ಲಾ, ಅನೀಲಕುಮಾರ ಕಮ್ಮಾರ, ಪರಶಿವಮೂರ್ತಿ ಮಾಟಲದಿನ್ನಿ, ಸಂಗಮೇಶ ಲೂತಿಮಠ, ಸೋಮಶೇಖರ ವೈಜಾಪೂರು ಸೇರಿದಂತೆ ಅನೇಕರು ಇದ್ದರು.

ಬಸಾಪೂರ ಕೆರೆ ಜನರಿಗೆ ಉಪಯೋಗವಿಲ್ಲ ಎಂದು 2007ರಲ್ಲಿ ಸರಕಾರಕ್ಕೆ ತಪ್ಪು ವರದಿ ನೀಡಿದ್ದ ಅಂದಿನ ಸಹಾಯಕ ಆಯುಕ್ತರ ವಿರುದ್ಧ ಸರಕಾರ ಕ್ರಮ ಕೈಗೊಳ್ಳಬೇಕು.
• **ದರ್ಶನ ಪುಟ್ಟಣಯ್ಯ**
ಶಾಸಕ

ಸುದ್ದಿ ಸಿಂಚನ

ಧೂಳು ಮುಕ್ತ ಕುಕನೂರು ಮಾಡಿ

ಕುಕನೂರು: ಸ್ಥಳೀಯ ಪಟ್ಟಣ ಪಂಚಾಯಿತಿಯ ಆಡಳಿತ ವೈಫಲ್ಯ, ಸ್ಮಶಾನ ಭೂಮಿಯ ತೀವ್ರ ಕೊರತೆ ಹಾಗೂ ಧೂಳು ಮುಕ್ತ ರಸ್ತೆ ನಿರ್ಮಾಣ ಸೇರಿದಂತೆ ಹಲವು ಮೂಲ ಸಮಸ್ಯೆಗಳ ಕುರಿತು ಕುಕನೂರು ಪಟ್ಟಣ ಹಿತರಕ್ಷಣಾ ಸಮಿತಿ ಪದಾಧಿಕಾರಿಗಳು ಕೊಪ್ಪಳದಲ್ಲಿ ಜಿಲ್ಲಾಧಿಕಾರಿ ಡಾ. ಸುರೇಶ ಇಟ್ನಾಳ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದರು. ಸಮಿತಿಯ ಸಂಚಾಲಕ ರವಿ ಜಕ್ಕಾ ಮಾತನಾಡಿ, ಪಟ್ಟಣ ಪಂಚಾಯಿತಿಯಲ್ಲಿ ಅಧಿಕಾರಿಗಳ ಗೈರುಹಾಜರಿ ಹಾಗೂ ನಿರ್ಲಕ್ಷ್ಯದಿಂದ ಸಾರ್ವಜನಿಕ ಸೇವೆಗಳಿಗೆ ಹಿನ್ನಡೆಯಾಗುತ್ತಿದೆ. ಅಧಿಕಾರಿಗಳು ವಾರದಲ್ಲಿ ಕೇವಲ ಮೂರು ದಿನ ಮಾತ್ರ ಲಭ್ಯವಿರುವುದರಿಂದ ಜನರ ಸಮಸ್ಯೆಗಳು ಬಗೆಹರಿಯದಂತಾಗಿವೆ. ಅಲ್ಲದೆ, ಪೌರಕಾರ್ಮಿಕರನ್ನು ಕಚೇರಿ ಕೆಲಸಗಳಿಗೆ ಬಳಸುತ್ತಿರುವುದರಿಂದ ಸ್ವಚ್ಛತೆ ಸೇರಿದಂತೆ ಮೂಲ ಸೇವೆಗಳೂ ಅಸ್ತವ್ಯಸ್ತವಾಗಿವೆ ಎಂದು ಆರೋಪಿಸಿದರು. ಸಮಿತಿಯ ಸದಸ್ಯ ಅಂದಪ್ಪ ಜವಳಿ ಮಾತನಾಡಿ, ಪಟ್ಟಣದಲ್ಲಿ ಸ್ಮಶಾನ ಭೂಮಿಯ ಕೊರತೆ ಗಂಭೀರ ಸಮಸ್ಯೆಯಾಗಿರುವುದನ್ನು ವಿವರಿಸಿದರು. ರೈಲ್ವೆ ಕಾಮಗಾರಿಯಿಂದ ಹಳೆಯ ಸ್ಮಶಾನಗಳು ಬಳಕೆಗೆ ಅನರ್ಹವಾಗಿದ್ದು, ನಾಗರಿಕರಿಗೆ ಅಂತ್ಯಕ್ರಿಯೆ ನಡೆಸಲು ಸೂಕ್ತ ಸ್ಥಳವಿಲ್ಲದ ಪರಿಸ್ಥಿತಿ ನಿರ್ಮಾಣವಾಗಿದೆ. ಈ ಹಿನ್ನೆಲೆ ಸರ್ಕಾರವು ಕನಿಷ್ಠ 12 ಎಕರೆ ಭೂಮಿಯನ್ನು ಖರೀದಿಸಿ ಆಧುನಿಕ ಸೌಲಭ್ಯಗಳೊಂದಿಗೆ ರುದ್ರಭೂಮಿ ನಿರ್ಮಿಸಿಕೊಡಬೇಕು ಎಂದು ಒತ್ತಾಯಿಸಿದರು.

ಸಮಿತಿಯ ಸಹ ಸಂಚಾಲಕ ಮಂಜುನಾಥ ನಾಡಗೌಡ್ರು ಮಾತನಾಡಿ, ಪಟ್ಟಣದ ಅಂಬೇಡ್ಕರ್ ವೃತ್ತದಿಂದ ಗುರುಕುಲದ ವರೆಗಿನ ರಸ್ತೆಯಲ್ಲಿ ಭಾರಿ ಧೂಳಿನ ಸಮಸ್ಯೆ ಇದೆ. ಇದರಿಂದ ಸಾರ್ವಜನಿಕರ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತಿದ್ದು, ತಕ್ಷಣವೇ ಈ ರಸ್ತೆಗೆ ಡಾಂಬರು ಹಾಕಿಸಿ ಧೂಳು ಮುಕ್ತಗೊಳಿಸಬೇಕೆಂದು ಆಗ್ರಹಿಸಿದರು. ಮನವಿ ಆಲಿಸಿದ ಜಿಲ್ಲಾಧಿಕಾರಿಗಳು ಸಮಸ್ಯೆಗಳ ಕುರಿತು ಪರಿಶೀಲನೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಸಮಿತಿಯ ಪದಾಧಿಕಾರಿಗಳಾದ ಕಳಕೇಶ ಹತ್ತಿಕಟಗಿ, ದೇವಪ್ಪ ರಾಟಿಮನಿ ಹಾಗೂ ಪಟ್ಟಣದ ಗಣ್ಯರಿದ್ದರು.

ವೆಂಕಟಪ್ಪ ಬಾವಿ ಚಿತ್ರೀಕರಣಕ್ಕೆ ಸಾವಿರ ರುಪಾಯಿ ಶುಲ್ಕ!



ಕನಕಗಿರಿಯ ವೆಂಕಟಪ್ಪ ಬಾವಿ.

ಕನಕಗಿರಿ: ರಾಜ್ಯ ಸಂರಕ್ಷಣಾ ಸ್ಮಾರಕ ಪಟ್ಟಿಯಲ್ಲಿರುವ ಇಲ್ಲಿನ ಇತಿಹಾಸ ಪ್ರಸಿದ್ಧ ವೆಂಕಟಪ್ಪ ಬಾವಿ ನಿರ್ವಹಣೆ ಅಗತ್ಯವಿದ್ದು, ಚಿತ್ರೀಕರಣಕ್ಕೆ ಬರುವವರಿಗೆ ಸಾವಿರ ರುಪಾಯಿ ಶುಲ್ಕ ನಿಗದಿಗೊಳಿಸಲಾಗಿದೆ ಎಂದು ತಹಸೀಲ್ದಾರ್‌ವಿಶ್ವನಾಥ ಮುರುಡಿ ತಿಳಿಸಿದ್ದಾರೆ. ಮಂಗಳವಾರ ತಹಶೀಲದಾರ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ವೆಂಕಟಪ್ಪ ಬಾವಿಯು ವಿಜಯನಗರ ಆಳ್ವಿಕೆಯಲ್ಲಿ ನಿರ್ಮಾಣಗೊಂಡಿದೆ. ಈ ಬಾವಿ ವೀಕ್ಷಿಸಲು ದಿನ ನಿತ್ಯ ನೂರಾರು ಜನ ಪ್ರವಾಸಿಗರು ಬರುತ್ತಿದ್ದು, ಈ ಅಪರೂಪದ ಬಾವಿ ಸಂರಕ್ಷಣೆ ನಮ್ಮ ಕರ್ತವ್ಯವಾಗಿದೆ. ಈ ಐತಿಹಾಸಿಕ ಸ್ಥಳ ಬಹಳ ಪ್ರಸಿದ್ಧಿ ಪಡೆದಿದ್ದರಿಂದ ರಾಜ್ಯದ ಬೇರೆ ಬೇರೆ ಜಿಲ್ಲೆಗಳ ಜನ, ನವ ವಧು-ವರರು ಚಿತ್ರೀಕರಣ ಹಾಗೂ ಪೋಟೋ ತೆಗೆಯಿಸಿಕೊಳ್ಳುತ್ತಿದ್ದಾರೆ. ಶುಭ ಸಮಾರಂಭಗಳ ಚಿತ್ರೀಕರಣಕ್ಕಾಗಿ ಬಂದವರಿಂದ ಬೆ. 8ರಿಂದ ಸಂಜೆ 5ರ ವರೆಗೆ ಪ್ರತಿ ಜೋಡಿಗೆ ಸಾವಿರ ನಿಗದಿಗೊಳಿಸಿದೆ. ಬಾವಿ ವೀಕ್ಷಣೆಗೆ ಯಾವುದೇ ರಸೀದಿ ಇರುವುದಿಲ್ಲ. ಸ್ಮಾರಕದ ನಿರ್ವಹಣೆಗಾಗಿ ಈ ಕ್ರಮ ಕೈಗೊಂಡಿದ್ದು, ಛಾಯಾ ಗ್ರಾಹಕರು, ಪ್ರವಾಸಿಗರು ಹಾಗೂ ಸ್ಥಳೀಯರು ಸಹಕರಿಸಬೇಕು ಎಂದು ತಹಸೀಲ್ದಾರ್‌ಮನವಿ ಮಾಡಿದರು.



ಕುಕನೂರು ಪಟ್ಟಣ ಹಿತರಕ್ಷಣಾ ಸಮಿತಿ ಪದಾಧಿಕಾರಿಗಳು ಕೊಪ್ಪಳದಲ್ಲಿ ಜಿಲ್ಲಾಧಿಕಾರಿ ಡಾ. ಸುರೇಶ ಇಟ್ನಾಳ ಅವರನ್ನು ಭೇಟಿ ಮಾಡಿ ಧೂಳು ಮುಕ್ತ ಕುಕನೂರು ಮಾಡಲು ಆಗ್ರಹಿಸಿ ಮನವಿ ಸಲ್ಲಿಸಿದರು.



ಕೊಪ್ಪಳ ಬಳಿಯ ಬಲ್ಡೋಟಾ ಸುಪರ್ದಿಯಲ್ಲಿರುವ ಬಸಾಪೂರ ಕೆರೆ ಸಾರ್ವಜನಿಕ ಬಳಕೆಗೆ ನೀಡಬೇಕೆಂದು ಒತ್ತಾಯಿಸಿ ರೈತರು ಕುರಿ ಹಾಗೂ ಜಾನುವಾರುಗಳೊಂದಿಗೆ ಮಂಗಳವಾರ ಮುತ್ತಿಗೆ ಹಾಕಿದರು.



ಗಂಗಾವತಿ ಮಾಜಿ ಶಾಸಕ ಪರಣ್ಣ ಮುನವಳ್ಳಿ ಅವರ 71ನೇ ಜನ್ಮ ದಿನಾಚರಣೆ ಹಿನ್ನೆಲೆಯಲ್ಲಿ ಇತ್ತೀಚಿಗೆ ಶಾಸಕ ಗಾಲಿ ಜನಾರ್ದನ ರೆಡ್ಡಿ ಪುಷ್ಪ ಗುಚ್ಛ ನೀಡಿ ಶುಭ ಕೋರಿದರು. ಈ ವೇಳೆ ಬಿಜೆಪಿ ಮುಖಂಡ ಮನೋಹರಗೌಡ ಇದ್ದರು.

ಬಸಾಪೂರ ಕೆರೆ ಪ್ರವೇಶಕ್ಕೆ ಅವಕಾಶ ಕೊಡಿ

ಬಲ್ಡೋಟಾ ಕಾರ್ಖಾನೆ ಮುಂಭಾಗದಲ್ಲಿ ಪ್ರತಿಭಟನೆ | ಕುರಿ ಮತ್ತು ಜಾನುವಾರುಗಳೊಂದಿಗೆ ಪ್ರವೇಶಕ್ಕೆ ಯತ್ನ

• **ಕನ್ನಡಪ್ರಭ ವಾರ್ತೆ** ಕೊಪ್ಪಳ

ಬಲ್ಡೋಟಾ ಅಧೀನದಲ್ಲಿರುವ ಬಸಾಪೂರ ಕೆರೆಯನ್ನುಸಾರ್ವಜನಿಕಬಳಕೆಗೆಮುಕ್ತಗೊಳಿಸಬೇಕು ಎಂದು ಒತ್ತಾಯಿಸಿ ರಾಜ್ಯ ರೈತ ಸಂಘದ ನೇತೃತ್ವದಲ್ಲಿಮಂಗಳವಾರನಗರದಹೊರವಲಯದ ಹೆದ್ದಾರಿಯಲ್ಲಿರುವ ಬಲ್ಡೋಟಾ ಕಾರ್ಖಾನೆ ಮುಂಭಾಗದಲ್ಲಿ ರೈತರಿಂದ ಜಾನುವಾರು ಹಾಗೂ ಕುರಿಗಳೊಂದಿಗೆ ಮುತ್ತಿಗೆ ಯತ್ನ ನಡೆಯಿತು.

ನಗರದ ಪ್ರವಾಸಿ ಮಂದಿರದಿಂದ ಬೈಕ್ ಗಳ ಮುಖಾಂತರ ಹೋರಾಟಗಾರರು ನಗರದ ಹೆದ್ದಾರಿಯಲ್ಲಿರುವ ಬಲ್ಡೋಟಾ ಮುಂಭಾಗದ ವರೆಗೆ ಪ್ರತಿಭಟನಾ ಮೆರವಣಿಗೆ ಮೂಲಕ ಆಗಮಿಸಿದರು. ನೂರಾರು ಕುರಿಗಳು ಹಾಗೂ ಜಾನುವಾರುಗಳೊಂದಿಗೆ ರೈತರು ಆಗಮಿಸಿದ್ದರು. ಬಲ್ಡೋಟಾ ಅಧೀನದಲ್ಲಿರುವ ಕೆರೆಯನ್ನು ಸಾರ್ವಜನಿಕರ ಬಳಕೆಗೆ ನೀಡಬೇಕು ಎಂದು ಒತ್ತಾಯಿಸಿಕಾರ್ಖಾನೆಒಳಗಡೆಪ್ರವೇಶಕ್ಕೆಮುಂದಾದರು. ಮೆಲುಕೋಟೆ ವಿಧಾನಸಭಾ ಕ್ಷೇತ್ರದ ಶಾಸಕ ದರ್ಶನ ಪುಟ್ಟಣಯ್ಯ ಹಾಗೂ ರೈತ ಸಂಘದ ಗೌರವಾಧ್ಯಕ್ಷ ಚಾಮರಾಜ ಮಾಲಿಪಾಟೀಲ್ ಹೋರಾಟದ ನೇತೃತ್ವ ವಹಿಸಿದ್ದರು.

ಪ್ರವೇಶಕ್ಕೆ ಯತ್ನ: ಬಲ್ಡೋಟಾ ಕಾರ್ಖಾನೆಯ ಮುಂಭಾಗದಿಂದ ಕೆರೆಯೊಳಗೆ ಹೋಗಲು ಪ್ರಯತ್ನಿಸಿದರು. ಈ ವೇಳೆ ಪೊಲೀಸರು ಅಡ್ಡಗಟ್ಟಿ ತಡೆದರು. ಇದರಿಂದ ಪೊಲೀಸರು ಹಾಗೂ ರೈತರ ನಡುವೆ ಮಾತಿನ ಚಕಮಕಿ ನಡೆಯಿತು. ಕಾರ್ಖಾನೆಯೊಳಗೆ ಜಾನುವಾರುಗಳೊಂದಿಗೆ ನುಗ್ಗಲು ಪ್ರಯತ್ನಿಸಿದ್ದರಿಂದ ಸ್ಥಳದಲ್ಲಿ ಬಿಗುವಿನ ವಾತಾವರಣ ನಿರ್ಮಾಣವಾಗಿತ್ತು. ಬಲ್ಡೋಟಾ ಸುಪರ್ದಿಯಲ್ಲಿರುವ ಬಸಾಪೂರ ಕೆರೆಯೊಳಗೆ ನುಗ್ಗಲು ಪ್ರಯತ್ನಿಸಿದರು. ಈ ವೇಳೆ ಹೋರಾಟಗಾರರನ್ನು ಪೊಲೀಸರು ತಡೆದರು. ಕೊನೆಗೆ ಜಿಲ್ಲಾಧಿಕಾರಿ ಡಾ. ಸುರೇಶ ಇಟ್ನಾಳ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ ಅವರು ಸ್ಥಳಕ್ಕಾಗಮಿಸಿ, ಹೋರಾಟಗಾರರ ಮನವೊಲಿಸುವ ಪ್ರಯತ್ನ ಮಾಡಿದರು.



ಕೊಪ್ಪಳ ಬಳಿಯ ಬಲ್ಡೋಟಾ ಸುಪರ್ದಿಯಲ್ಲಿರುವ ಬಸಾಪೂರ ಕೆರೆ ಸಾರ್ವಜನಿಕ ಬಳಕೆಗೆ ನೀಡಬೇಕೆಂದು ಒತ್ತಾಯಿಸಿ ರೈತರು ಪ್ರತಿಭಟನೆ ನಡೆಸಿದರು.

ತಪ್ಪು ವರದಿ ನೀಡಿದ ಅಧಿಕಾರಿ: ಶಾಸಕ ಪುಟ್ಟಣ್ಣಯ್ಯ ಆಕ್ರೋಶ

ಶಾಸಕ ದರ್ಶನ ಪುಟ್ಟಣಯ್ಯ, ಬಸಾಪೂರ ಕೆರೆ ಜನರಿಗೆ ಉಪಯೋಗವಿಲ್ಲ ಎಂದು 2007ರಲ್ಲಿ ಸರಕಾರಕ್ಕೆತಪ್ಪು ವರದಿ ನೀಡಿದ್ದ ಅಂದಿನ ಸಹಾಯಕ ಆಯುಕ್ತರ ವಿರುದ್ಧ ಸರಕಾರ ಕ್ರಮ ಕೈಗೊಳ್ಳಬೇಕು. ಅಂದು ಆಗಿನ ಎಸಿ ತಪ್ಪು ವರದಿ ನೀಡದಿದ್ದರೆ ಬಲ್ಡೋಟಾ ಕಾರ್ಖಾನೆಗೆ ಬಸಾಪೂರ ಕೆರೆ ಸೇರುತ್ತಿರಲಿಲ್ಲ. ಅಲ್ಲದೆ, ಇಲ್ಲಿಯ ಬಸಾಪೂರ ಕೆರೆ ಸರಕಾರದ್ದು. ಕಂಪನಿಗೆ ನೀಡಿರುವ ಕ್ರಮ ಸರಿಯಲ್ಲ. ಮೇ 6ರಂದು ಬೆಂಗಳೂರಿನಲ್ಲಿ ಕೆರೆ ಅಭಿವೃದ್ಧಿ ಪ್ರಾಧಿಕಾರದ ಮುಂದೆ ಈ ಕುರಿತು ವಿಚಾರಣೆ ನಡೆಯಲಿದ್ದು, ಈ ವಿಚಾರದಲ್ಲಿ ರೈತರ ಪರವಾಗಿ ಜಿಲ್ಲಾಡಳಿತ ವರದಿಯನ್ನು ಮುಂದಿಡಬೇಕು. ರೈತರಿಗಾಗಿರುವ ಅನ್ಯಾಯದ ಕುರಿತು ಮುಖ್ಯಮಂತ್ರಿ ಗಮನಕ್ಕೂ ತರುವ ಕೆಲಸ ನಾನು ಮಾಡುತ್ತೇನೆ ಎಂದು ಶಾಸಕ ದರ್ಶನ ಪುಟ್ಟಣಯ್ಯ ಹೇಳಿದರು.

ಒತ್ತುವರಿ ವರದಿ ಸರ್ಕಾರಕ್ಕೆ ಸಲ್ಲಿಕೆ: ಡಿಸಿ ಇಟ್ನಾಳ

ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ಜಿಲ್ಲಾಧಿಕಾರಿ ಡಾ. ಸುರೇಶ್ ಇಟ್ನಾಳ ಪ್ರತಿಕ್ರಿಯಿಸಿ, ''ಈ ಕೆರೆಗೆ ಸಂಬಂಧಿಸಿದಂತೆ ಹಿಂದಿನಿಂದಲೂ ನ್ಯಾಯಾಲಯದ ಆದೇಶವಿದೆ. ಅಲ್ಲದೆ, ಈ ವಿಚಾರದಲ್ಲಿ ರೈತರು ತಮ್ಮ ಅಹವಾಲು ಸಲ್ಲಿಸಲು ಅವಕಾಶವಿದೆ. ಬಲ್ಡೋಟಾ ಕಂಪನಿ ಸುಮಾರು ಎರಡು ಎಕರೆ ಭೂಮಿಯನ್ನು ಒತ್ತುವರಿ ಮಾಡಿಕೊಂಡಿದೆ ಎಂಬ ವಿಚಾರಕ್ಕೆ ಸಂಬಂಧಿಸಿದಂತೆ ವರದಿಯನ್ನು ಸರಕಾರಕ್ಕೆ ಸಲ್ಲಿಸಿದ್ದೇವೆ. ಸರಕಾರದಿಂದ ಈ ಮುಂಚೆ ಕೆರೆ ಮಂಜೂರುಗೊಂಡಿದ್ದು, ಮೇ 6ರಂದು ಕೆರೆ ಅಭಿವೃದ್ಧಿ ಪ್ರಾಧಿಕಾರದಿಂದ ಬೆಂಗಳೂರಿನಲ್ಲಿ ವಿಚಾರಣೆ ನಡೆಯಲಿದೆ. ಇದರಲ್ಲಿನಡೆಯುವ ತೀರ್ಮಾನದಂತೆ ಸರಕಾರದ ನಿರ್ದೇಶನ ಅನುಸಾರಮುಂದಿನಕ್ರಮಕೈಗೊಳ್ಳಲಾಗುತ್ತದೆ' ಎಂದು ಹೇಳಿದರು.

ಪೊಲೀಸರಿಂದ ನೋಟಿಸ್: ರೈತರು ಜಾನುವಾರುಗಳೊಂದಿಗೆ ಬಲ್ಡೋಟಾ ಕಾರ್ಖಾನೆಗೆ ಮುತ್ತಿಗೆ ಹಾಕಲು ಪೊಲೀಸ್ ಇಲಾಖೆ ಅನುಮತಿ ಕೊಟ್ಟಿರಲಿಲ್ಲ. ಈ ವಿಚಾರದಲ್ಲಿ ಕಾನೂನಾತ್ಮಕವಾಗಿ ಹೋರಾಟ ಮಾಡಬೇಕು. ಅದನ್ನು ಬಿಟ್ಟು ಮುತ್ತಿಗೆ ಹಾಕುವ ಕ್ರಮ ಸರಿಯಲ್ಲ ಎಂದು ನಗರ ಠಾಣೆಯ ಪೊಲೀಸರು ಹೋರಾಟಕ್ಕೂ ಮುನ್ನವೇ ಹೋರಾಟಗಾರರಿಗೆ ನೋಟಿಸ್ ಸಹ ಜಾರಿ ಮಾಡಿದ್ದರು. ಇದು, ಕೂಡ ವಿವಾದಕ್ಕೆ ಕಾರಣಕ್ಕಾಗಿ ಪೊಲೀಸ್ ಇಲಾಖೆಯ ನೋಟಿಸ್ ಗೆ ಜಗ್ಗದೇ ಹೋರಾಟಗಾರರಿಂದ ಕಾರ್ಖಾನೆಗೆ ಮುತ್ತಿಗೆ ಹಾಕುವ ಯತ್ನವು ನಡೆಯಿತು.

ನ್ಯಾಯಾಲಯದ ಆದೇಶ ಉಲ್ಲಂಘನೆ: ರಾಜ್ಯ ರೈತ ಸಂಘದ ಅಧ್ಯಕ್ಷ ಬಡಗಲಪುರ ನಾಗೇಂದ್ರ ಮಾತನಾಡಿ, ಹೈಕೋರ್ಟ್ ಆದೇಶವನ್ನು ಬಲ್ಡೋಟಾ ಕಂಪನಿ ಉಲ್ಲಂಘಿಸಿ, ಬಸಾಪೂರ ಕೆರೆಯನ್ನು ತನ್ನ ಸುಪರ್ದಿಗೆ ತೆಗೆದುಕೊಂಡಿರುವ ಕ್ರಮ ಸರಿಯಲ್ಲ. ಇನ್ನಾದರೂ ಈ ವಿಚಾರದಲ್ಲಿ ಜಿಲ್ಲಾಡಳಿತ ಸ್ಪಷ್ಟ ಭರವಸೆಯನ್ನು ರೈತರಿಗೆ ನೀಡಬೇಕು. ಕೆರೆಯನ್ನು ರೈತರಿಗೆ ಕೊಡುವವರೆಗೂ ಹೋರಾಟ ಮುಂದುವರಿಯುತ್ತದೆ. ಶಾಂತಿಯುತ ಹೋರಾಟಕ್ಕೆ ನಾವು ಬದ್ಧರಾಗಿದ್ದೇವೆ. ರೈತರಿಗೆ ನೋಟಿಸ್ ನೀಡಿ ರೌಡಿಶೀಟ್ ತೆರೆಯುವ ಬೆದರಿಕೆಗಳನ್ನು ಪೊಲೀಸ್ ಇಲಾಖೆ ನಿಲ್ಲಿಸಬೇಕು'' ಎಂದು ಆಗ್ರಹಿಸಿದರು. ಈ ವೇಳೆ ರೈತ ಸಂಘದ ಭೀಮಸೇನ ಕಲಕೇರಿ, ಜೆ.ಎಂ. ವೀರಸಂಗಯ್ಯ, ಮುಕ್ಕಣ್ಣ ಮೇಸ್ತ್ರಿ, ಯಮನೂರಪ್ಪ ಹಾಲಹಳ್ಳಿ, ಗುಡದಪ್ಪ ಸಂಗಟಿ, ಫಕೀರಪ್ಪ ಬಂಗ್ಲಿ, ಗುಡದಪ್ಪ ಗಿಣಿಗೇರಿ ಸೇರಿದಂತೆ ಇತರರು ಇದ್ದರು.

ಶ್ರೀಕೃಷ್ಣ ದೇವರಾಯ ನಾಟಕ ಪ್ರದರ್ಶನ

• **ಕನ್ನಡಪ್ರಭ ವಾರ್ತೆ**ಗಂಗಾವತಿ

ನಗರದ ಶ್ರೀ ಕೊಲ್ಲಿ ನಾಗೇಶ್ವರರಾವ್ ಗಂಗಯ್ಯ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಬಹುಮುಖಿ ಸಾಂಸ್ಕೃತಿಕ ವೇದಿಕೆ, ಐಕ್ಯೂಎಸಿ ಹಾಗೂ ಕೊಪ್ಪಳ ವಿಶ್ವವಿದ್ಯಾಲಯದ ಪ್ರದರ್ಶನ ಕಲೆಗಳ ವಿಭಾಗದ ಸಹಯೋಗದಲ್ಲಿ ಶ್ರೀಕೃಷ್ಣ ದೇವರಾಯ ನಾಟಕ ಪ್ರದರ್ಶನಗೊಂಡಿತು.

ನಾಟಕ ಉದ್ಘಾಟಿಸಿ ಮಾತನಾಡಿದ ಕಾಲೇಜು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ವೀರೇಶ ಬಲಕುಂದಿ' ರಂಗಭೂಮಿ ನಮ್ಮ ಬದುಕಿನ ಕನ್ನಡಿ. ರಂಗಭೂಮಿಯು ಮನುಷ್ಯನ ವ್ಯಕ್ತಿತ್ವದ ವೈವಿಧ್ಯಮಯ ಸ್ವಭಾವಗಳನ್ನು ಪ್ರತಿನಿಧಿಸುತ್ತದೆ. ಸಿನಿಮಾಕ್ಕಿಂತ ರಂಗಭೂಮಿ ನಮಗೆ ಹತ್ತಿರ. ರಂಗಭೂಮಿ ನಮ್ಮೊಡನೆ ನಿರಂತರ ಸಂವಾದವನ್ನು ನಡೆಸುತ್ತದೆ ಎಂದರು.

ಪ್ರಾಚಾರ್ಯ ಡಾ. ಎಸ್.ಜಿ. ಗುರಿಕಾರ ಅಧ್ಯಕ್ಷತೆ ವಹಿಸಿದ್ದರು.

ಈ ವೇಳೆ ವೇದಿಕೆಯ ಸಂಚಾಲಕಿ ಡಾ. ಮುಮ್ತಾಜ್ ಬೇಗಂ ಮಾತನಾಡಿದರು. ಗುಂಡೂರು ಪವನ್ ಕುಮಾರ ಸ್ವಾಗತಿಸಿದರು. ಪವಿತ್ರಾ ಪ್ರಾರ್ಥಿಸಿದರು. ಡಾ. ಬಸವರಾಜ ಗೌಡನಬಾವಿ ನಿರೂಪಿಸಿದರು.

ಸಭೆಯಲ್ಲಿ ಐಕ್ಯೂಎಸಿ ಸಂಚಾಲಕ ಮಂಜುನಾಥ ಕೆ.ಎಸ್., ಡಾ. ಜೆ.ಕೃಷ್ಣ, ಡಾ. ಅಣ್ಣೋಜಿರೆಡ್ಡಿ, ರವಿ ಹಾದಿಮನಿ, ಅಶೋಕ, ದೊರಬಾಬು, ಸುಮಲತಾ, ಸಲೀಂ, ಅನಿತಾ, ಮಣಿಕಂಠ,ಶಿವರಾಜ, ಮಂಜಣ್ಣ ಪೂಜಾರ, ಲಕ್ಷ್ಮೀಬಾಯಿ, ಬಾಲಪ್ಪ ಹುಲಿಹೈದರ್, ಡಾ. ಉಷಾರಾಣಿ ಇನ್ನಿತರರು ಉಪಸ್ಥಿತರಿದ್ದರು.



ಗಂಗಾವತಿ ಶ್ರೀ ಕೊಲ್ಲಿ ನಾಗೇಶ್ವರರಾವ್ ಗಂಗಯ್ಯ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಬಹುಮುಖಿ ಸಾಂಸ್ಕೃತಿಕ ವೇದಿಕೆ, ಐಕ್ಯೂಎಸಿ ಹಾಗೂ ಕೊಪ್ಪಳ ವಿಶ್ವವಿದ್ಯಾಲಯದ ಪ್ರದರ್ಶನ ಕಲೆಗಳ ವಿಭಾಗದ ಸಹಯೋಗದಲ್ಲಿ ಶ್ರೀಕೃಷ್ಣ ದೇವರಾಯ ನಾಟಕ ಪ್ರದರ್ಶನಗೊಂಡಿತು.

ಅಪರಿಚಿತ ವಾಹನ ಡಿಕ್ಕಿ: ಇಬ್ಬರು ಬೈಕ್ ಸವಾರರ ಸಾವು

• **ಕನ್ನಡಪ್ರಭ ವಾರ್ತೆ** ಕೊಪ್ಪಳ

ಸಮೀಪದ ಕಿಡದಾಳ ಬಳಿಯ ಕಿಮ್ಸ್ ಆಸ್ಪತ್ರೆಯ ಬಳಿ ಅಪಘಾತ ಸಂಭವಿಸಿ ಇಬ್ಬರು ಬೈಕ್ ಸವಾರರು ಮೃತಪಟ್ಟ ಘಟನೆ ಮಂಗಳವಾರ ನಡೆದಿದೆ. ಕೊಪ್ಪಳದಿಂದ ಸಿಂಧನೂರಿಗೆ ಹೊರಟಿದ್ದ ಯುವಕರ ಬೈಕಿಗೆ ಅಪರಿಚಿತ ವಾಹನವೊಂದು ಗುದ್ದಿ ಪರಾರಿಯಾಗಿದೆ. ಬೈಕ್‌ನಲ್ಲಿದ್ದ ಇಬ್ಬರೂ ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ. ಸದ್ಯ ಕೊಪ್ಪಳ ಕಾಳಿದಾಸ ನಗರ ವಾಸವಾಗಿದ್ದರು. ಮೃತರನ್ನು ರಾಯಚೂರು ಜಿಲ್ಲೆಯ ಸಿಂಧನೂರಿನ ಸದ್ದಾಂ ಹಾಗೂ ಆತನ ಸ್ನೇಹಿತ ವಿಜಯಪುರ ಜಿಲ್ಲೆಯ ಹಿರೇಸೋಗಿ ಗ್ರಾಮದ ಶಿವಾಜಿ ಎಂದು ಗುರುತಿಸಲಾಗಿದೆ. ಕೊಪ್ಪಳ ಗ್ರಾಮೀಣ ಠಾಣಾ ವ್ಯಾಪ್ತಿಯಲ್ಲಿ ಘಟನೆ ಜರುಗಿದ್ದು, ಪ್ರಕರಣ ದಾಖಲಾಗಿದೆ. ಸ್ಥಳಕ್ಕೆ ಎಸ್ಪಿ ಡಾ. ರಾಮ್ ಎಲ್. ಅರಸಿದ್ದಿ ಭೇಟಿ ನೀಡಿ ಪರಿಶೀಲನೆ ನಡೆಸಿದರು.



ನೂತನ ನ್ಯಾಯಾಲಯದಲ್ಲಿ ಹೊರಗುತ್ತಿಗೆ ಸಿಬ್ಬಂದಿ ಪೂರೈಕೆಗೆ ಅರ್ಜಿ ಆಹ್ವಾನ

• **ಕನ್ನಡಪ್ರಭ ವಾರ್ತೆ** ಕೊಪ್ಪಳ

ಜಿಲ್ಲೆಯ ನೂತನ ನ್ಯಾಯಾಲಯದಲ್ಲಿ ಕಾರ್ಯನಿರ್ವಹಿಸಲು ಹೊರಗುತ್ತಿಗೆ ಆಧಾರದ ಮೇಲೆ ಟೈಪಿಸ್ಟ್, ಅಟೆಂಡರ್‌ಮತ್ತು ಜವಾನರನ್ನು ಪೂರೈಸಲು ನೋಂದಾಯಿತ ಅರ್ಹ ಸಂಸ್ಥೆಗಳಿಂದ ಇ-ಟೆಂಡರ್ ಕೆಪಿಪಿಪಿ ಪೋರ್ಟಲ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಇದೇ ಮೇ 16ರ ಸಂಜೆ 5 ಗಂಟೆ ಆಗಿದೆ.

ಅರ್ಹಸಂಸ್ಥೆಗಳುತಮ್ಮಅರ್ಜಿಯನ್ನುಕೆಪಿಪಿಪಿಪೋರ್ಟಲ್ ವೆಬ್‌ಸೈಟ್ https://kppp.karnataka.gov.in ಟೆಂಡರ್ ರೆಫರೆನ್ಸ ನಂ: HCK/2026&27/SEO165 ಮೂಲಕ ಅರ್ಜಿ ಸಲ್ಲಿಸಬೇಕು. ನಂತರ ಬಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಮುಖ್ಯ ಆಡಳಿತ ಅಧಿಕಾರಿಗಳು, ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಕೊಪ್ಪಳ ಇವರನ್ನು ಕಾರ್ಯಾಲಯದ ಅವಧಿಯಲ್ಲಿ ಸಂಪರ್ಕಿಸಬಹುದು ಎಂದು ಕೊಪ್ಪಳ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ಪ್ರಕಟಣೆ ತಿಳಿಸಿದೆ.

ರೋಜಗಾರ್ ದಿವಸ್ | ಜಿಪಂ ಐಇಸಿ ಸಂಯೋಜಕ ಶ್ರೀನಿವಾಸ ಚಿತ್ರಗಾರ ಹೇಳಿಕೆ

ಮನರೇಗಾ ಕೂಲಿಕಾರರು ಕೆಲಸಕ್ಕೆ ಹಾಜರಾಗಿ

• **ಕನ್ನಡಪ್ರಭ ವಾರ್ತೆ** ಕೊಪ್ಪಳ

ಮಹಾತ್ಮಾ ಗಾಂಧಿ ನರೇಗಾ ಯೋಜನೆಯಡಿ ಎಲ್ಲ ಕೂಲಿಕಾರರು ಫಾರಂ ನಂ. 6 ಸಲ್ಲಿಸುವ ಮೂಲಕ ಕೂಲಿ ಕೆಲಸಕ್ಕೆ ಹಾಜರಾಗುವಂತೆ ಜಿಲ್ಲಾ ಪಂಚಾಯಿತಿ ಐಇಸಿ ಸಂಯೋಜಕ ಶ್ರೀನಿವಾಸ ಚಿತ್ರಗಾರ ಕರೆ ನೀಡಿದರು.

ತಾಲೂಕಿನ ಕಲಕೇರಿ ಗ್ರಾಮದ ಸಂತ ಷರೀಪರ ದೇವಸ್ಥಾನದ ಆವರಣದಲ್ಲಿ ಜರುಗಿದ ಮಹಾತ್ಮ ಗಾಂಧಿ ನರೇಗಾ ಯೋಜನೆಯ ಐಇಸಿ ಕಾರ್ಯಕ್ರಮದಡಿ ರೋಜಗಾರ್ ದಿವಸ್ ಕಾರ್ಯಕ್ರಮದಲ್ಲಿ ಮಾತನಾಡಿದರು.

ಪ್ರತಿ ಮಾನವ ದಿನಕ್ಕೆ ₹370 ಕೂಲಿ ನಿಗದಿಪಡಿಸಿದ್ದು, ಸಂಪೂರ್ಣವಾಗಿ ಕೂಲಿ ಕೆಲಸ ನಿರ್ವಹಿಸಿ ಪೂರ್ತಿ ಹಣ ಪಡೆದುಕೊಳ್ಳಬೇಕು. ಬಿಸಿಲಿನ ಪ್ರಮಾಣ ದಿನದಿಂದ ದಿನಕ್ಕೆ ಹೆಚ್ಚಳವಾಗುತ್ತಿದ್ದು, ಕೆಲಸದ ಜೊತೆಗೆ ಆರೋಗ್ಯ ಕಡೆ ಕಾಳಜಿವಹಿಸಬೇಕು. 18 ವರ್ಷ ಮೇಲ್ಪಟ್ಟ ಕುಟುಂಬದ ಸದಸ್ಯರು ಜಾಬ್‌ಕಾರ್ಡ್ ಬಳಕೆ ಮಾಡಿಕೊಂಡು ಕೂಲಿ ಕೆಲಸ ಪಡೆಯಲು ಕಡ್ಡಾಯವಾಗಿ ನಮೂನೆ-6 ಸಲ್ಲಿಸಬೇಕು. ಮೇ ಮತ್ತು ಜೂನ್ ವರೆಗೆ 60 ದಿನಗಳ ಕೂಲಿ ಕೆಲಸ ಪಡೆಯಬೇಕು ಎಂದರು.

ಕೂಲಿ ಹಣದಿಂದ ಮಕ್ಕಳ ಶಾಲಾ, ಕಾಲೇಜು ಶುಲ್ಕ ಭರಿಸಲು, ಮಕ್ಕಳ ಸ್ಪರ್ಧಾತ್ಮಕ ಪರೀಕ್ಷೆಗೆ ಶುಲ್ಕ ಹಾಗೂ ಕುಟುಂಬ ನಿರ್ವಹಣೆಗೆ ಅನುಕೂಲವಾಗುತ್ತದೆ ಎಂದರು.

ಜಾಬ್‌ಕಾರ್ಡ್‌ನಲ್ಲಿರುವ ಕುಟುಂಬದ ಎಲ್ಲ ಸದಸ್ಯರು ಇ-ಕೆವೈಸಿ ಹೊಂದಿದ ನಂತರವೇ ಎನ್‌ಎಂಆರ್‌ಪ್ರಕಾರ ಕೂಲಿಕಾರರುಕೂಲಿಕೆಲಸಕ್ಕೆಹಾಜರಾಗಬೇಕು. 1 - 2ನೇ ಹಾಜರಾತಿ ಕಡ್ಡಾಯವಾಗಿರುತ್ತದೆ ಎಂದು ಹೇಳಿದರು.

ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ ಮಾತನಾಡಿ, ಪ್ರತಿ ಜಾಬ ಕಾರ್ಡ್‌ಗೆ 100 ಮಾನವ ದಿನಗಳ ಕೂಲಿ ಕೆಲಸ ನೀಡಲಾಗುತ್ತಿದ್ದು, ಇದರ ಸದುಪಯೋಗ ಪಡೆಯಬೇಕು. ಎಲ್ಲ ಕೂಲಿಕಾರರು ಸಾಮಾಜಿಕ ಭದ್ರತೆ ವಿಮೆಗಳಾದ ಪಿಎಂಜೆಜೆಬಿವೈ, ಪಿಎಂಎಸ್‌ಬಿವೈ.ಗಳಲ್ಲಿ ನೋಂದಣಿ ಮಾಡಿಕೊಳ್ಳುವಂತೆ ಕರೆ ನೀಡಿದರು.

ಕುಮಾರ ಪರಗಿ, ಬೇರ್‌ಫೂಟ್ ಟೆಕ್ನಿಷಿಯನ್ ಮಾರುತಿ ವಾಲ್ಮೀಕಿ, ಗ್ರಾಮ ಕಾಯಕ ಮಿತ್ರ ರಾಧಾ, ಕಾಯಕ ಬಂಧುಗಳಾದ ನಾಗರಾಜ ಮಲಾಜಿ, ಮುತ್ತು ಲಮಾಣಿ, ಕುಮಾರ ಚವ್ಹಾಣ್, ರಾಮಣ್ಣ ಉಪ್ಪಾರ, ವೀರೇಶ ಹರಿಜನ, ಕೂಲಿಕಾರರಿದ್ದರು.



ಕೊಪ್ಪಳ ತಾಲೂಕಿನ ಕಲಕೇರಿ ಗ್ರಾಮದ ಸಂತ ಷರೀಪರ ದೇವಸ್ಥಾನದ ಆವರಣದಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯ ಐಇಸಿ ಕಾರ್ಯಕ್ರಮದಡಿ ರೋಜಗಾರ್‌ದಿವಸ್ ಜರುಗಿತು.

ತರಬೇತಿಗೆ ನೋಂದಾಯಿಸಿ

ಕೊಪ್ಪಳ: ಜಿಲ್ಲೆಯಲ್ಲಿ ಯುವನಿಧಿ ಯೋಜನೆಯಡಿ ನೋಂದಣಿಯಾದಫಲಾನುಭವಿಗಳುಕಡ್ಡಾಯವಾಗಿ ಕೌಶಲ್ಯ ತರಬೇತಿ ಮತ್ತು ಉದ್ಯಮಶೀಲತೆ ತರಬೇತಿ ಪಡೆಯಲು ನೋಂದಾಯಿಸುವಂತೆ ಜಿಲ್ಲಾ ಕೌಶಲ್ಯ ಮಿಷನ್ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ತಿಳಿಸಿದ್ದಾರೆ. ಯುವನಿಧಿ ಯೋಜನೆಯಡಿ ನೋಂದಾಯಿಸಿ ನಿರುದ್ಯೋಗ ಭತ್ಯೆ ಪಡೆಯುತ್ತಿರುವ ಯುವಕ, ಯುವತಿಯರಿಗೆಯುವನಿಧಿಪ್ಲಸ್‌ಕಾರ್ಯಕ್ರಮದಡಿ ಕೌಶಲ್ಯ ತರಬೇತಿ ಮತ್ತು ಉದ್ಯಮಶೀಲತೆ ತರಬೇತಿಯನ್ನು ಜಿಲ್ಲೆಯ ಜಿಟಿಟಿಸಿ, ಸಿಡಾಕ್, ಸರ್ಕಾರಿ ಐಟಿಐಗಳಲ್ಲಿ ಯುವನಿಧಿ ಪ್ಲಸ್ ಅಡಿಯಲ್ಲಿ ತರಬೇತಿ ನೀಡಲಾಗುತ್ತಿದೆ. ಆದರೂ ನಿರೀಕ್ಷಿತ ಸಂಖ್ಯೆಯ ಯುವನಿಧಿ ಫಲಾನುಭವಿಗಳು ಯುವನಿಧಿ ಪ್ಲಸ್ ಅಡಿಯಲ್ಲಿತರಬೇತಿ ಪಡೆಯುತ್ತಿಲ್ಲ. ಕಾರಣ ಜಿಲ್ಲೆಯ ಎಲ್ಲಾ ಯುವನಿಧಿ ಫಲಾನುಭವಿಗಳು https://skillmission.karnataka.gov.in/app/registration_verify ಈ ಲಿಂಕ್‌ನ್ನು ಉಪಯೋಗಿಸಿ ತುರ್ತಾಗಿ ನೋಂದಾಯಿಸಿಕೊಂಡು ಯುವನಿಧಿ ಪ್ಲಸ್ ಅಡಿಯಲ್ಲಿ ತರಬೇತಿ ಪಡೆದುಕೊಳ್ಳಬೇಕು ಮತ್ತು ಈ ಸುವರ್ಣಾವಕಾಶವನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಪೋರ್ಟಲ್‌ನಲ್ಲಿನ ಕೌಶಲ್ಯ ತರಬೇತಿ ನೋಂದಣಿ ಸಂಬಂಧ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಚೇರಿ, ಕೆ.ಜಿ.ಐ.ಡಿ. ಕಚೇರಿ ಎದುರುಗಡೆ, ಜಿಲ್ಲಾಡಳಿತ ಭವನ ಕೊಪ್ಪಳ ರವರನ್ನು ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದು.

ಕುಷ್ಟಗಿಯಿಂದ ಬೆಂಗಳೂರಿಗೆ ರೈಲು ಸೇವೆ ಆರಂಭಿಸಿ

ಸಚಿವ ಸೋಮಣ್ಣ, ಸಂಸದ ಹಿಟ್ನಾಳ ಪ್ರಾಮಾಣಿಕ ಪ್ರಯತ್ನ ಮಾಡಲಿ: ಜೆ.ಜೆ. ಆಚಾರ್

• **ಕನ್ನಡಪ್ರಭ ವಾರ್ತೆ** ಕುಷ್ಟಗಿ

ಪಟ್ಟಣದಲ್ಲಿ ರೈಲು ನಿಲ್ದಾಣ ನಿರ್ಮಾಣಗೊಂಡು ಒಂದು ವರ್ಷವಾದರೂ ಕೇವಲ ಒಂದೇ ರೈಲು ಓಡುತ್ತಿದ್ದು, ಉಳಿದ ಸಮಯದಲ್ಲಿ ನಿಲ್ದಾಣ ಖಾಲಿಯಾಗಿರುತ್ತದೆ. ಕುಷ್ಟಗಿಯಿಂದ ಬೆಂಗಳೂರಿಗೆ ಹಾಗೂ ಕುಷ್ಟಗಿಯಿಂದ ಹುಬ್ಬಳ್ಳಿಗೆ ಮತ್ತೊಂದು ರೈಲು ಬಿಡಬೇಕು ಎಂದು ರೈಲ್ವೆ ಹೋರಾಟ ಸಮಿತಿಯ ಸದಸ್ಯ ಪುರಸಭೆ ಮಾಜಿ ಸದಸ್ಯ ಜೆ.ಜೆ. ಆಚಾರ್ ಒತ್ತಾಯಿಸಿದರು.

ಪಟ್ಟಣದ ಹಳೆ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶತಮಾನದ ಹೋರಾಟದ ಫಲವಾಗಿ ಕುಷ್ಟಗಿ ಭಾಗಕ್ಕೆ ರೈಲು ಓಡುತ್ತಿದ್ದು,ಸಮರ್ಪಕ ಸೇವೆ ದೊರೆಯದಂತಾಗಿದೆ ಎಂದರು.

ಕುಷ್ಟಗಿಯಿಂದ ಬೆಂಗಳೂರಿಗೆ ರೈಲು ಓಡಿಸುವಂತೆ ರೈಲ್ವೆ ಇಲಾಖೆ ಅಧಿಕಾರಿಗಳಿಗೆ ಹಾಗೂ ರಾಜ್ಯ ರೈಲ್ವೆ ಸಚಿವ ಸೋಮಣ್ಣ ಅವರಿಗೆ ಶಾಸಕ ದೊಡ್ಡನಗೌಡ ಪಾಟೀಲ, ಮಾಜಿ ಸಚಿವ ಅಮರೇಗೌಡ ಬಯ್ಯಾಪೂರ ಅವರ ನೇತೃತ್ವದಲ್ಲಿ ಮನವಿ ಸಲ್ಲಿಸಿದ್ದರೂ ಇದುವರೆಗೂ ಯಾವುದೆ ಕ್ರಮಕ್ಕೆ ಮುಂದಾಗುತ್ತಿಲ್ಲ. ಸಚಿವ ಸೋಮಣ್ಣ ಅವರು ನಮ್ಮ ಕುಷ್ಟಗಿಯಿಂದ ಬೆಂಗಳೂರು ನಗರಕ್ಕೆ ರೈಲು ಬಿಡುವಲ್ಲಿ ಸರಿಯಾದ ರೀತಿಯಲ್ಲಿ ಸ್ಪಂದನೆ ನೀಡುತ್ತಿಲ್ಲ ಎಂದು ದೂರಿದರು.

ಈ ಭಾಗದ ಜನರ ಮೇಲೆ ಅವರಿಗೆ ಅಭಿಮಾನ, ಪ್ರೀತಿಯಿಲ್ಲದಂತಾಗಿದೆ. ಕುಷ್ಟಗಿಯಿಂದ ಬೆಂಗಳೂರು ವರೆಗೆ ರೈಲು ಸಂಚಾರ ಆರಂಭವಾದಲ್ಲಿ ರೈಲ್ವೆ ಇಲಾಖೆಗೆ ಆದಾಯದ ಜತೆಗೆ ಇಲ್ಲಿನ ಹತ್ತಾರು ನಗರಗಳು ಹಾಗೂ ನೂರಾರು ಗ್ರಾಮದ ಜನರಿಗೂ ಅನುಕೂಲವಾಗಲಿದೆ ಎಂದರು.

ಪ್ರತಿ ದಿನ ಸಾವಿರಾರು ಸಂಖ್ಯೆಯ ಪ್ರಯಾಣಿಕರು ಕುಷ್ಟಗಿಯಿಂದ ಖಾಸಗಿ ಹಾಗೂ ಸಾರಿಗೆ ಬಸ್ಸಿನಲ್ಲಿ ಪ್ರಯಾಣ ಮಾಡುತ್ತಿದ್ದು ಒಂದು ರೈಲು ಸೇವೆಯ ಅಗತ್ಯವಿದೆ. ಪ್ರತ್ಯೇಕ ರೈಲು ಅಥವಾ ಹುಬ್ಬಳ್ಳಿ ಬೆಂಗಳೂರು, ವಿಜಯಪುರ, ಯಶವಂತಪುರ ಅಥವಾ ಸಿಂದನೂರು -ಯಶವಂತಪುರ ಹೊರಡುವ ಎಲ್ಲ ಲಿಂಕ್ ರೈಲುಗಳನ್ನು ಕುಷ್ಟಗಿ ವರೆಗೂ ಓಡಿಸಬೇಕು ಎಂದು ಆಗ್ರಹಿಸಿದರು.

ಬಸವರಾಜ ಗಾಣಿಗೇರ ಮಾತನಾಡಿ ಸಚಿವ ಸೋಮಣ್ಣ ಹಾಗೂ ರೈಲ್ವೆ ಇಲಾಖೆ ಅಧಿಕಾರಿಗಳು ಕುಷ್ಟಗಿ ಬೆಂಗಳೂರು ರೈಲು ಓಡಿಸಲು ಸೂಕ್ತ ಕ್ರಮಕ್ಕೆ ಮುಂದಾಗಬೇಕು. ಸಂಸದ ರಾಜಶೇಖರ ಹಿಟ್ನಾಳ ಅವರು ಮುತುವರ್ಜಿ ವಹಿಸುವ ಮೂಲಕ ರೈಲು ಸಂಚಾರ ಸೇವೆಗೆ ಪ್ರಾಮಾಣಿಕ ಪ್ರಯತ್ನ ಮಾಡಬೇಕು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ಹೋರಾಟದ ರೂಪುರೇಷೆಗಳನ್ನು ಹಾಕಿಕೊಳ್ಳಲಾಗುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಮಿತಿಯ ಪ್ರಮುಖರಾದ ಕಿರಣ ಜ್ಯೋತಿ, ಎನ್.ಎಸ್. ಘೋರ್ಪಡೆ ಇದ್ದರು.

ಹುಲಿಗೆಮ್ಮ ಜಾತ್ರೆಗೆ ಹೆಚ್ಚುವರಿ ಬಸ್: ಡಿಸಿ ಇಟ್ನಾಳ ಸೂಚನೆ

ಕೊಪ್ಪಳ: ತಾಲೂಕಿನ ಶ್ರೀ ಕ್ಷೇತ್ರ ಹುಲಿಗಿಯ ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ ಜಾತ್ರೆ ಅವಧಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಬಸ್‌ಗಳ ವ್ಯವಸ್ಥೆ ಮಾಡಬೇಕು ಮತ್ತು ಜಾತ್ರಾ ಸಮಯದಲ್ಲಿ ಅಗ್ನಿಶಾಮಕ ವಾಹನವನ್ನು ಕ್ಷೇತ್ರದಲ್ಲಿ ಕಾಯ್ದಿರಿಸುವಂತೆ ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಹುಲಿಗಿ ಜಾತ್ರೆಯ ಪ್ರಯುಕ್ತ ಸಾಕಷ್ಟು ಸಂಖ್ಯೆಯಲ್ಲಿ ಭಕ್ತಾದಿಗಳು ರಾಜ್ಯದ ವಿವಿಧ ಭಾಗಗಳಿಂದ ಕ್ಷೇತ್ರಕ್ಕೆ ಬರುತ್ತಿದ್ದು, ಭಕ್ತರ ಅನುಕೂಲಕ್ಕಾಗಿ ಬಂದು ಹೋಗಲು ಹೆಚ್ಚುವರಿ ಬಸ್‌ಗಳನ್ನು ಸಂಚಾರಕ್ಕೆ ಒದಗಿಸಲು ಕಲ್ಯಾಣ ಕರ್ನಾಟಕ ಸಾರಿಗೆ ಸಂಸ್ಥೆಯ ಕೊಪ್ಪಳ, ಹೊಸಪೇಟೆ, ಕುಷ್ಟಗಿ ಗಂಗಾವತಿ, ಡಿಪೋಗಳ ವ್ಯವಸ್ಥಾಪಕರು ಅಗತ್ಯ ಕ್ರಮ ಕೈಗೊಳ್ಳಬೇಕು. ಭಕ್ತರ ಪ್ರಮಾಣಕ್ಕೆ ಯಾವುದೇ ರೀತಿಯ ಅನಾನುಕೂಲತೆ ಆಗದಂತೆ ಹೆಚ್ಚಿನ ಸಂಖ್ಯೆಯ ಬಸ್ಸುಗಳನ್ನು ಬಿಡುವ ಬಗ್ಗೆ ಇತ್ತೀಚೆಗೆ ನಡೆದ ಸಭೆಯಲ್ಲಿ ನಿರ್ಣಯಿಸಲಾಗಿದೆ. ಪೊಲೀಸ್ ಇಲಾಖೆಯ ಸಹಕಾರದೊಂದಿಗೆ ಬಸ್‌ಗಳ ನಿಲುಗಡೆ ಸ್ಥಳ ಗುರುತಿಸಲೂ ಕ್ರಮ ವಹಿಸುವಂತೆ ಕಲ್ಯಾಣ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಕೊಪ್ಪಳ ವಿಭಾಗದ ವಿಭಾಗೀಯ ನಿಯಂತ್ರಕರು ಮತ್ತು ಇತರೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.ಜಾತ್ರೆ ಅವಧಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಹಾಗೂ ವಾಹನಗಳು ಬರುವುದರಿಂದ ಹಾಗೂ ವಿವಿಧ ರೀತಿಯ ಅಂಗಡಿಗಳು ಜಾತ್ರಾ ಅವಧಿಯಲ್ಲಿ ಹಾಕುವುದರಿಂದ ಯಾವುದೇ ಅಹಿತಕರ ಘಟನೆಗಳು ಜರುಗದಂತೆ ಮೇ 10 ರಿಂದ 14ರ ವರೆಗೆ ನದಿ ತೀರದಲ್ಲಿ ಬೋಟ್, ರೋಪ್ ಹಾಗೂ ಒಂದು ಅಗ್ನಿಶಾಮಕ ವಾಹನವನ್ನು ಜಾತ್ರಾ ಅವಧಿಯಲ್ಲಿ ಕಾಯ್ದಿರಿಸಲು ಅಗ್ನಿಶಾಮಕ ಅಧಿಕಾರಿಗಳು ಕ್ರಮ ವಹಿಸಲು ಸೂಚಿಸಿದ್ದಾರೆ.

ವ್ಯಕ್ತಿ ಕಾಣೆ: ಪತ್ತೆಗೆ ಸಹಕರಿಸಲು ಸಾರ್ವಜನಿಕರಲ್ಲಿ ಮನವಿ

• **ಕನ್ನಡಪ್ರಭ ವಾರ್ತೆ** ಕೊಪ್ಪಳ

ಕುಷ್ಟಗಿ ಪಟ್ಟಣದ ನಿವಾಸಿ 40 ವರ್ಷದ ವಿಜಯ ಕುಮಾರಸಿದ್ದರಾಮಪ್ಪ ಸೂಡಿ ಕಾಣೆಯಾಗಿದ್ದು, ಪತ್ತೆಗೆ ಸಹಕರಿಸಲು ಕುಷ್ಟಗಿಯ ಪೊಲೀಸ್ ಠಾಣಾಧಿಕಾರಿಗಳು ಸಾರ್ವಜನಿಕರಲ್ಲಿ ಮನವಿ ಮಾಡಿಕೊಂಡಿದ್ದಾರೆ.ವಿಜಯ ಕುಮಾರ ಏಪ್ರಿಲ್ 11, 2026ರಂದು ಬೆಳಗ್ಗೆ 8 ಗಂಟೆಗೆ ಸುಮಾರಿಗೆ



ಮನೆಯಲ್ಲಿ ಯಾರಿಗೂ ಹೇಳದೆ ಹೋಗಿದ್ದು, ಕುಷ್ಟಗಿ ಪಟ್ಟಣದ ಬಸ್ ನಿಲ್ದಾಣ, ಬಸವೇಶ್ವರ ವೃತ್ತ ಇತರೆ ಕಡೆ ಹುಡುಕಾಡಿದ್ದು, ಎಲ್ಲಿಯೂ ಸಿಕ್ಕಿಲ್ಲ ಎಂದು ಕಾಣೆಯಾದ ವ್ಯಕ್ತಿಯ ಸಹೋದರ ಕುಷ್ಟಗಿ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ವ್ಯಕ್ತಿ ಚಹರೆ ಪಟ್ಟಿ: ವಿಜಯ ಕುಮಾರ ಸಿದ್ದರಾಮಪ್ಪ ಸೂಡಿ, ವಯಸ್ಸು 40 ವರ್ಷ, 5.2 ಅಡಿ ಎತ್ತರ, ಕೆಂಪು ಮೈ ಬಣ್ಣ, ಸಾಧಾರಣ ಮೈಕಟ್ಟು, ದುಂಡು ಮುಖ, ಗುಂಗುರು ಕೂದಲು ಹೊಂದಿದ್ದು, ಮನೆಯಿಂದ ಹೊರಡುವಾಗ ಪಿಂಕ್ ಟಿ ಶರ್ಟ್, ಗ್ರೇ ಬಣ್ಣದ ನೈಟ್ ಪ್ಯಾಂಟ್ ಧರಿಸಿರುತ್ತಾನೆ. ಈ ವ್ಯಕ್ತಿಯು ಕನ್ನಡ ಮತ್ತು ತೆಲುಗು ಭಾಷೆ ಮಾತನಾಡುತ್ತಾನೆ.ಈ ವ್ಯಕ್ತಿ ಯಾರಿಗಾದರು ಕಂಡುಬಂದಲ್ಲಿ ಅಥವಾ ಇತನ ಬಗ್ಗೆ ಮಾಹಿತಿ ದೊರೆತಲ್ಲಿ ಕೊಪ್ಪಳ ಜಿಲ್ಲಾ ಪೊಲೀಸ್ ಅಧೀಕ್ಷಕರ ದೂರವಾಣಿ ಸಂಖ್ಯೆ: 08539-230111, ಗಂಗಾವತಿ ಡಿ.ಎಸ್.ಪಿ. ಮೊ.ಸಂ: 9480803721 ಹಾಗೂ ಕುಷ್ಟಗಿ ಸಿ.ಪಿ.ಐ. ಮೊ.ಸಂ: 9480803732 ಮತ್ತು ಕುಷ್ಟಗಿ ಪಿ.ಎಸ್.ಐ ಮೊ.ಸಂ: 9480803757 ಗೆ ಅಥವಾ ಕುಷ್ಟಗಿ ಪೊಲೀಸ್ ಠಾಣೆಗೆ ಮತ್ತು ಕೊಪ್ಪಳ ನಿಯಂತ್ರಣ ಕೊಠಡಿಗಾಗಲಿ ಮಾಹಿತಿ ನೀಡುವಂತೆ ಕುಷ್ಟಗಿ ಪೊಲೀಸ್ ಠಾಣೆಯ ಪ್ರಕಟಣೆ ತಿಳಿಸಿದೆ.೦

ನೈಋತ್ಯ ರೈಲ್ವೆ

ರೈಲ್ವೆ ಸಚಿವಾಲಯ
ಅಧಿಸೂಚನೆ
ಬೆಂಗಳೂರು, 16 ಏಪ್ರಿಲ್, 2026

S.O.1933(E).- ರೈಲ್ವೆ ಕಾಯ್ದೆ, 1989 (1989 ರ 24) (ಇನ್ನು ಮುಂದೆ ಸದರಿ ಕಾಯ್ದೆ ಎಂದು ಉಲ್ಲೇಖಿಸಲಾಗಿದೆ) ರ ಸೆಕ್ಷನ್ 20A ರ ಉಪ-ವಿಭಾಗ (1) ರಿಂದ ನೀಡಲಾದ ಅಧಿಕಾರಗಳನ್ನು ಚಲಾಯಿಸುವಾಗ, ಕೇಂದ್ರ ಸರ್ಕಾರವು ಸಾರ್ವಜನಿಕ ಉದ್ದೇಶಕ್ಕಾಗಿ, ಇಲ್ಲಿ ಲಗತ್ತಿಸಲಾದ ವೇಳಾಪಟ್ಟಿಯಲ್ಲಿ ನೀಡಲಾದ ಸಂಕ್ಷಿಪ್ತ ವಿವರಣೆಯನ್ನು ವಿಶೇಷ ರೈಲ್ವೆ ಯೋಜನೆಯ ಕಾರ್ಯಗತಗೊಳಿಸುವಿಕೆಗೆ ಅಗತ್ಯವಿದೆ ಎಂದು ತೃಪ್ತಿಪಡಿಸಿದ ನಂತರ, ಕರ್ನಾಟಕ ರಾಜ್ಯದಲ್ಲಿ "ರಾಣೆಬೆನ್ನೂರು ಯಾರ್ಡ್ (ರಾಣೆಬೆನ್ನೂರು ನಗರ)ದಲ್ಲಿ ಕಿ.ಮೀ: 359/500-600 ರಲ್ಲಿ LC ಸಂಖ್ಯೆ 217 ರ ಬದಲಿಗೆ ROB ನಿರ್ಮಾಣ", ಅಂತಹ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳುವ ಉದ್ದೇಶವನ್ನು ಈ ಮೂಲಕ ಘೋಷಿಸುತ್ತದೆ:

ಈ ಭೂಮಿಯಲ್ಲಿ ಆಸಕ್ತಿ ಹೊಂದಿರುವ ಯಾವುದೇ ವ್ಯಕ್ತಿಯು, ಅಧಿಕೃತ ಗೆಜೆಟ್‌ನಲ್ಲಿ ಈ ಅಧಿಸೂಚನೆಯನ್ನು ಪ್ರಕಟಿಸಿದ ದಿನಾಂಕದಿಂದ ಮೂವತ್ತು ದಿನಗಳ ಒಳಗೆ, ಸದರಿ ಕಾಯ್ದೆಯ ಸೆಕ್ಷನ್ 20D ಯ ಉಪ-ವಿಭಾಗ (1) ರ ಅಡಿಯಲ್ಲಿ ಮೇಲೆ ತಿಳಿಸಲಾದ ಉದ್ದೇಶಕ್ಕಾಗಿ ಆಕ್ಷೇಪಣೆ ಸಲ್ಲಿಸಬಹುದು ಮತ್ತು ಅಂತಹ ಭೂಮಿಯನ್ನು ಬಳಸಬಹುದು:

ಅಂತಹ ಪ್ರತಿಯೊಂದು ಆಕ್ಷೇಪಣೆಯನ್ನು "ರಾಣೆಬೆನ್ನೂರು ಅಂಗಳದಲ್ಲಿ (ರಾಣೆಬೆನ್ನೂರು ನಗರ) ಕಿ.ಮೀ. 359/500-600 ರಲ್ಲಿ LC ಸಂಖ್ಯೆ 217 ರ ಬದಲಿಗೆ ROB ನಿರ್ಮಾಣ" ಕ್ಕಾಗಿ ಸಕ್ಷಮ ಪ್ರಾಧಿಕಾರಕ್ಕೆ, ಅಂದರೆ ಉಸ್ತುವಾರಿ ಭೂಸ್ವಾಧೀನ ಅಧಿಕಾರಿ ಹಾವೇರಿ ಸಹಾಯಕ ಆಯುಕ್ತರು ಮತ್ತು ಪ್ರಾದೇಶಿಕ ಆಯುಕ್ತರು, ಬೆಳಗಾವಿಗೆ ಲಿಖಿತವಾಗಿ ಸಲ್ಲಿಸಬೇಕು ಮತ್ತು ಅದರ ಆಧಾರಗಳನ್ನು ವಿವರಿಸಬೇಕು ಮತ್ತು ಸಕ್ಷಮ ಪ್ರಾಧಿಕಾರವು ಆಕ್ಷೇಪಣೆದಾರರಿಗೆ ವೈಯಕ್ತಿಕವಾಗಿ ಅಥವಾ ಕಾನೂನು ವೃತ್ತಿಪರರ ಮೂಲಕ ಕೇಳಲು ಅವಕಾಶವನ್ನು ನೀಡಬೇಕು ಮತ್ತು ಅಂತಹ ಎಲ್ಲಾ ಆಕ್ಷೇಪಣೆಗಳನ್ನು ಆಲಿಸಿದ ನಂತರ ಮತ್ತು ಹೆಚ್ಚಿನ ವಿಚಾರಣೆಯನ್ನು ಮಾಡಿದ ನಂತರ, ಯಾವುದಾದರೂ ಇದ್ದರೆ, ಸಕ್ಷಮ ಪ್ರಾಧಿಕಾರವು ಅಗತ್ಯವೆಂದು ಭಾವಿಸಿದಂತೆ, ಆದೇಶದ ಮೂಲಕ, ಆಕ್ಷೇಪಣೆಗಳನ್ನು ಅನುಮತಿಸಬಹುದು ಅಥವಾ ನಿರಾಕರಿಸಬಹುದು:

ಸದರಿ ಕಾಯ್ದೆಯ ಸೆಕ್ಷನ್ 20D ಯ ಉಪ-ವಿಭಾಗ (2) ರ ಅಡಿಯಲ್ಲಿ ಸಕ್ಷಮ ಪ್ರಾಧಿಕಾರವು ಮಾಡಿದ ಯಾವುದೇ ಆದೇಶವು ಅಂತಿಮವಾಗಿರುತ್ತದೆ:

ಭೂಮಿ ಈ ಅಧಿಸೂಚನೆಯ ಅಡಿಯಲ್ಲಿ ಬರುವ ಭೂಮಿಯ ನಕ್ಷೆಗಳು ಮತ್ತು ಇತರ ವಿವರಗಳು ಲಭ್ಯವಿದೆ ಮತ್ತು ಆಸಕ್ತ ವ್ಯಕ್ತಿಯು ಮೇಲೆ ತಿಳಿಸಲಾದ ಸಕ್ಷಮ ಪ್ರಾಧಿಕಾರದ ಕಚೇರಿಯಲ್ಲಿ ಪರಿಶೀಲಿಸಬಹುದು.

ವೇಳಾಪಟ್ಟಿ

ಕ್ರ. ಸಂ.	ಗ್ರಾಮದ ಹೆಸರು	ಸರ್ವೆ ನಂ.	ಭಾಗ	ಹೆಕ್ಟೇರ್‌ನಲ್ಲಿ ವಿಸ್ತೀರ್ಣ
1	ರಾಣೆಬೆನ್ನೂರು ನಗರ	827	E	0.1113
2	ರಾಣೆಬೆನ್ನೂರು ನಗರ	785	B	0.0405
3	ರಾಣೆಬೆನ್ನೂರು ನಗರ	785	-	0.0152
4	ರಾಣೆಬೆನ್ನೂರು ನಗರ	780	B	0.0506
				0.0057
				0.9510
				0.0809
5	ರಾಣೆಬೆನ್ನೂರು ನಗರ	781	2D+2E/1, 2,3,4+2F	0.0759
				0.0253
				0.0297
6	ರಾಣೆಬೆನ್ನೂರು ನಗರ	782	-	0.1138
				0.0835
				0.0708
				0.0278
				0.0253
7	ರಾಣೆಬೆನ್ನೂರು ನಗರ	778	-	0.0531
				0.0430
ಒಟ್ಟು				**1.8034**

ನಂ.ಡಬ್ಲ್ಯೂ.271/ಸಿಎನ್/ಬಿಎನ್‌ಸಿ/2026-27/ಲ್ಯಾಂಡ್ ಎಸ್‌ಆರ್‌ಪಿ/1727

ವಿವರಗಳಿಗೆ **https://egazette.gov.in** ಗೆ ಲಾಗ್ ಆನ್ ಮಾಡಿ.

ಸಹಿ/-
ಪ್ರದೀಪ್ ಪುರಿ,
ಮುಖ್ಯ ಎಂಜಿನಿಯರ್-III, ನಿರ್ಮಾಣ,
ಬೆಂಗಳೂರು ಕಂಟೋನ್ಮೆಂಟ್

ಪಿಯುಬಿ/94/ಎಎಎಸ್/ಪಿಆರ್‌ಬಿ/ಎಸ್‌ಡಬ್ಲ್ಯುಆರ್/2026-27

ಸುಲಭ ಟಿಕೆಟ್ ಬುಕಿಂಗ್, PNR ಸ್ಥಿತಿ ಮತ್ತು ಹೆಚ್ಚಿನ ರೈಲ್ವೆ ಸೇವೆಗಳಿಗಾಗಿ **RailOne** ಅಪ್ಲಿಕೇಶನ್ ಡೌನ್‌ಲೋಡ್ ಮಾಡಿ.

South Western Railway-SWR | SWRRLY | @SWRAILWAYHQ | @sw_railways

ನೈಋತ್ಯ ರೈಲ್ವೆ

ರೈಲ್ವೆ ಸಚಿವಾಲಯ
ಅಧಿಸೂಚನೆ
ಬೆಂಗಳೂರು, 9 ಏಪ್ರಿಲ್, 2026

S.O.1825(E). – ರೈಲ್ವೆ ಕಾಯ್ದೆ, 1989 (1989 ರ ಕಾಯ್ದೆ ಸಂಖ್ಯೆ 24) ರ ಸೆಕ್ಷನ್ 2 ರ ಷರತ್ತು 37(A) ಅಡಿಯಲ್ಲಿ ನೀಡಲಾದ ಅಧಿಕಾರವನ್ನು ಚಲಾಯಿಸಿ, ಭಾರತ ಸರ್ಕಾರದ ರೈಲ್ವೆ ಸಚಿವಾಲಯ (ನೈಋತ್ಯ ರೈಲ್ವೆ, ನಿರ್ಮಾಣ ಸಂಸ್ಥೆ, ಬೆಂಗಳೂರು ಕಂಟೋನ್ಮೆಂಟ್), ಕೆಳಗಿನ ಕೋಷ್ಟಕದಲ್ಲಿ ಉಲ್ಲೇಖಿಸಲಾದ ಯೋಜನೆಗಳು ಕರ್ನಾಟಕ ರಾಜ್ಯದಲ್ಲಿ ಸಾರ್ವಜನಿಕ ಉದ್ದೇಶಕ್ಕಾಗಿ ರಾಷ್ಟ್ರೀಯ ಮೂಲಸೌಕರ್ಯವನ್ನು ಒದಗಿಸಲು "ವಿಶೇಷ ರೈಲ್ವೆ ಯೋಜನೆ" ಎಂದು ಅಧಿಕೃತ ಗೆಜೆಟ್‌ನಲ್ಲಿ ಅಧಿಸೂಚನೆ ಪ್ರಕಟವಾದ ದಿನಾಂಕದಿಂದ ಜಾರಿಗೆ ಬರುವಂತೆ ಸೂಚಿಸುತ್ತವೆ.

ಕ್ರ. ಸಂ.	ಯೋಜನೆಯ ಹೆಸರು	ಗ್ರಾಮ	ತಾಲ್ಲೂಕು	ಜಿಲ್ಲೆ
1	ಹುಬ್ಬಳ್ಳಿ ವಿಭಾಗ-ಪ್ರಸ್ತಾಪಿಸಲಾಗಿದೆ ಹುಲ್ಕೋಟಿ-ಚಿಕ್ಕಂಡಿಗೋಳ ರಸ್ತೆಯಲ್ಲಿರುವ ಹುಲ್ಕೋಟಿ ಯಾರ್ಡ್‌ನಲ್ಲಿ ಹುಲ್ಕೋಟಿ ಮತ್ತು ಗದಗ ನಿಲ್ದಾಣಗಳ ನಡುವೆ ಕಿ.ಮೀ.46/100-200 ರಲ್ಲಿ 1x9.25x5.5 ಮೀ ಗಾತ್ರದ ಎಲ್‌ಸಿ ಸಂಖ್ಯೆ 26 ರ ಬದಲಿಗೆ ಆರ್‌ಯುಬಿ ನಿರ್ಮಾಣಕ್ಕೆ ಪ್ರಸ್ತಾವಿತ.	ಹುಲ್ಕೋಟಿ	ಗದಗ	ಗದಗ

ನಂ.ಡಬ್ಲ್ಯೂ.271/ಸಿಎನ್/ಬಿಎನ್‌ಸಿ/2026-27/ಲ್ಯಾಂಡ್ ಎಸ್‌ಆರ್‌ಪಿ/1727

ಹೆಚ್ಚಿನ ವಿವರಗಳಿಗೆ **https://egazette.gov.in** ಗೆ ಲಾಗ್‌ಆನ್ ಮಾಡಿ.

ಅಜಯ್ ಶರ್ಮ,
ಮುಖ್ಯ ಆಡಳಿತಾಧಿಕಾರಿ/ನಿರ್ಮಾಣ/ಬೆಂಗಳೂರು ದಂಡು

ಪಿಯುಬಿ/93/ಎಎಎಸ್/ಪಿಆರ್‌ಬಿ/ಎಸ್‌ಡಬ್ಲ್ಯುಆರ್/2026-27

ಸುಲಭ ಟಿಕೆಟ್ ಬುಕಿಂಗ್, PNR ಸ್ಥಿತಿ ಮತ್ತು ಹೆಚ್ಚಿನ ರೈಲ್ವೆ ಸೇವೆಗಳಿಗಾಗಿ **RailOne** ಅಪ್ಲಿಕೇಶನ್ ಡೌನ್‌ಲೋಡ್ ಮಾಡಿ.

South Western Railway-SWR | SWRRLY | @SWRAILWAYHQ | @sw_railways

ಶಿಕ್ಷಕರ ಮೇಲೆ ಶಿಸ್ತು ಕ್ರಮಕ್ಕೆ ಆಗ್ರಹ

ಕನಕಗಿರಿ: ಶಾಲೆಯ ಅವಧಿ ಮುಗಿದ ಮೇಲೆ ಶೂ ಹಂಚಿಕೆ ಮಾಡಿರುವ ಪ್ರಭಾರಿ ಮುಖ್ಯ ಶಿಕ್ಷಕ ನಾಗಪ್ಪ ಹೊಸ್ಮನಿ ಅವರ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಬಸರಿಹಾಳ ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷ ಪರಶುರಾಮ್ ಆಗ್ರಹಿಸಿದ್ದಾರೆ. ಶಿಕ್ಷಕ 2025-26ನೇ ಸಾಲಿನಲ್ಲಿ ಓದುತ್ತಿರುವ ಸುಮಾರು 80ಕ್ಕೂ ಹೆಚ್ಚು ಮಕ್ಕಳಿಗೆ ಶೂಗಳನ್ನು ಶೈಕ್ಷಣಿಕ ವರ್ಷ ಮುಕ್ತಾಯವಾದ ಮೇಲೆ ಹಂಚಿಕೆ ಮಾಡಿದ್ದು, ಗ್ರಾಮಸ್ಥರ ಆಕ್ರೋಶಕ್ಕೆ ಕಾರಣವಾಗಿದೆ ಎಂದರು. ಮುಖಂಡ ವಿಶ್ವನಾಥ ಖ್ಯಾಡೇದ್ ಮಾತನಾಡಿ, ಈ ಹಿಂದೆ ಪ್ರಭಾರಿ ಮುಖ್ಯಶಿಕ್ಷಕನಾಗಿದ್ದ ಶಿವಪ್ಪ ಹೆಳವರ ಪ್ರಸಕ್ತ ಸಾಲಿನ ಶೂಗಳು ಬೇಸಿಗೆ ರಜಾ ದಿನಗಳಲ್ಲಿ ಹಂಚಿಕೆ ಮಾಡಿ ನಿಯಮವನ್ನು ಗಾಳಿ ತೂರಿದ್ದಾರೆ. ಈ ಇಬ್ಬರು ಶಿಕ್ಷಕರಿಗೆ ತಿಳಿ ಹೇಳಿದರೂ ಕೇಳದೆ ಮಾಹಿತಿ ಸೋರಿಕೆ ಮಾಡಿ ಗ್ರಾಮದ ಹಾಗೂ ಇಲಾಖೆ ಗೌರವಕ್ಕೆ ಚ್ಯುತಿ ತಂದಿದ್ದಾರೆ. ಇವರ ವಿರುದ್ಧ ಶಿಸ್ತು ಕ್ರಮ ಜರುಗಿಸಬೇಕು ಎಂದರು.

ನೈಋತ್ಯ ರೈಲ್ವೆ

ರೈಲ್ವೆ ಸಚಿವಾಲಯ
ಅಧಿಸೂಚನೆ
ಬೆಂಗಳೂರು, 24 ಏಪ್ರಿಲ್, 2026

S.O.2080(E).– ರೈಲ್ವೆ ಕಾಯ್ದೆ, 1989 (1989ರ 24)ರ ಸೆಕ್ಷನ್ 20F ನ ಷರತ್ತು (6) ಮತ್ತು ಸೆಕ್ಷನ್-2ರ ಷರತ್ತು 7Aಯಿಂದ ನೀಡಲಾದ ಅಧಿಕಾರಗಳನ್ನು ಚಲಾಯಿಸುವಾಗ, ರೈಲ್ವೆ ಸಚಿವಾಲಯ (ನೈಋತ್ಯ ರೈಲ್ವೆ, ನಿರ್ಮಾಣ ಸಂಸ್ಥೆ, ಬೆಂಗಳೂರು ಕಂಟೋನ್ಮೆಂಟ್) ಕೆಳಗಿನ ಕೋಷ್ಟಕದ ಕಾಲಮ್ (4)ರಲ್ಲಿ ಉಲ್ಲೇಖಿಸಲಾದ ಅಧಿಕಾರಿಯನ್ನು **'ಸಮರ್ಥ ಅಧಿಕಾರಿ'** ಎಂದು ಮತ್ತು ಕೆಳಗಿನ ಕೋಷ್ಟಕದ ಕಾಲಮ್ (5)ರಲ್ಲಿ ಉಲ್ಲೇಖಿಸಲಾದ ಅಧಿಕಾರಿಯನ್ನು **'ಮಧ್ಯಸ್ಥಗಾರ'** ಎಂದು ಅಧಿಕಾರ ನೀಡುತ್ತದೆ, ಈ ಅಧಿಸೂಚನೆಯನ್ನು ಅಧಿಕೃತ ಗೆಜೆಟ್‌ನಲ್ಲಿ ಪ್ರಕಟಿಸಿದ ದಿನಾಂಕದಿಂದ ಜಾರಿಗೆ ಬರುವಂತೆ, ಸಾರ್ವಜನಿಕ ಉದ್ದೇಶಕ್ಕಾಗಿ ಅಗತ್ಯವಿರುವ ಭೂಸ್ವಾಧೀನಕ್ಕಾಗಿ ಕೆಳಗಿನ ಕೋಷ್ಟಕದ ಕಾಲಮ್ (3)ರಲ್ಲಿ ಉಲ್ಲೇಖಿಸಲಾದ ಜಿಲ್ಲೆಗಳಿಗೆ ಸಂಬಂಧಿಸಿದಂತೆ.

ಕ್ರಮ ಸಂಖ್ಯೆ	ಯೋಜನೆಯ ಹೆಸರು	ಜಿಲ್ಲೆ	ಸಕ್ಷಮ ಪ್ರಾಧಿಕಾರ	ಮಧ್ಯಸ್ಥಗಾರ
1	ಹೊಸಪೇಟೆ-ಬಳ್ಳಾರಿ ನಿಲ್ದಾಣಗಳ ನಡುವಿನ ಚತುರ್ಭುಜ (65ಕಿ.ಮೀ)	ವಿಜಯನಗರ	ಸಹಾಯಕ ಆಯುಕ್ತರು ಹೊಸಪೇಟೆ	ಪ್ರಾದೇಶಿಕ ಆಯುಕ್ತರು, ಕಲಬುರ್ಗಿ
		ಬಳ್ಳಾರಿ	ಸಹಾಯಕ ಆಯುಕ್ತರು ಬಳ್ಳಾರಿ	

[F.No.W.271/CN/BNC/2026-27 Land SRP/1727]

ಹೆಚ್ಚಿನ ಮಾಹಿತಿಗಳಿಗಾಗಿ: **https://egazette.gov.in** ಲಾಗಿನ್ ಮಾಡಿ

ಪ್ರದೀಪ್ ಪುರಿ
ಮುಖ್ಯ ಅಭಿಯಂತರರು, ಬೆಂಗಳೂರು ದಂಡು

PUB/88/AAD360/PRB/SWR/2026-27

ಸುಲಭ ಟಿಕೆಟ್ ಬುಕಿಂಗ್, ಪಿಎನ್‌ಆರ್ ಸ್ಥಿತಿ ಪರಿಶೀಲನೆ ಮತ್ತು ಹೆಚ್ಚಿನ ರೈಲ್ವೆ ಸೇವೆಗಳಿಗಾಗಿ **RailOne** ಅಪ್ಲಿಕೇಶನ್ ಡೌನ್‌ಲೋಡ್ ಮಾಡಿ.

South Western Railway - SWR | SWRRLY | @SWRAILWAYHQ | @sw_railways

ಬೆಂಗಳೂರು ಉತ್ತರ ನಗರ ಪಾಲಿಕೆ

ಕಾರ್ಯಪಾಲಕ ಅಭಿಯಂತರರ ಕಛೇರಿ, ವಲಯ-1,
ಸರ್ವಜ್ಞನಗರ ವಿಭಾಗ, 9ನೇ 'ಸಿ' ಮುಖ್ಯರಸ್ತೆ, ಹೆಚ್‌ಆರ್‌ಬಿಆರ್ ಲೇಔಟ್,
1ನೇ ಬ್ಲಾಕ್, ಕಲ್ಯಾಣನಗರ, ಬೆಂಗಳೂರು – 560043.

ಸಂಖ್ಯೆ: ಕಾಅ/ಎಸ್‌ಜಿಎನ್/ಕೆಪಿಪಿಪಿ/ಟೆಂಡರ್/02/2026-27 ದಿನಾಂಕ: 05-05-2026

ಅಲ್ಪಾವಧಿ ಟೆಂಡರ್ ಆಹ್ವಾನ ಪ್ರಕಟಣೆ (ಎನ್‌ಐಟಿ)

(ದ್ವಿ-ಲಕೋಟೆ ಪದ್ಧತಿ) (ಜಿಓಕೆ ಕರ್ನಾಟಕ ಪಬ್ಲಿಕ್ ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮೂಲಕ ಮಾತ್ರ)

ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ ವಿಭಾಗ), ಬೆಂಉನಪಾ, ವಲಯ-1, ಬೆಂಗಳೂರು ಇವರು ಗ್ರೇಟರ್ ಬೆಂಗಳೂರು ಪ್ರಾಧಿಕಾರದಲ್ಲಿ ನೋಂದಾಯಿತ ಅಥವಾ ಸಿಪಿಡಬ್ಲ್ಯೂಡಿ / ಕೆಪಿಡಬ್ಲ್ಯೂಡಿ / ರೈಲ್ವೇಸ್ / ಎಂಇಎಸ್ / ರಾಷ್ಟ್ರೀಯ ಹೆದ್ದಾರಿ ಅಥವಾ ಯಾವುದೇ ರಾಜ್ಯ ಸರ್ಕಾರದ ಸಂಸ್ಥೆಗಳಲ್ಲಿ ತತ್ಸಮಾನ ನೋಂದಾಯಿಸಿರುವ ಅರ್ಹ ಗುತ್ತಿಗೆದಾರರಿಂದ ಈ ಕೆಳಕಂಡ ನಿರ್ಮಾಣ ಕಾಮಗಾರಿಗಳಿಗಾಗಿ ಟೆಂಡರ್‌ಗಳನ್ನು ಆಹ್ವಾನಿಸಿದ್ದಾರೆ.

(ಸ್ಟ್ಯಾಂಡರ್ಡ್ ಟೆಂಡರ್ ಡಾಕ್ಯೂಮೆಂಟ್-ಕೆಡಬ್ಲ್ಯೂ-1, ಕೆಡಬ್ಲ್ಯೂ-2 & ಕೆಡಬ್ಲ್ಯೂ-3)

ಕ್ರ. ಸಂ.	ಕಾಮಗಾರಿಯ ಹೆಸರು / ಪ್ರವರ್ಗ
1	ವಾರ್ಡ್ ಸಂಖ್ಯೆ. 22, ನಾಗವಾರದಲ್ಲಿ ಪಾದಚಾರಿ ಮಾರ್ಗಗಳ ದುರಸ್ತಿ ಮತ್ತು ನಿರ್ವಹಣೆ ಕಾಮಗಾರಿ. (ಪ್ರವರ್ಗ-11(ಎ)) – **ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 25.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 25,000/–**
2	ವಾರ್ಡ್ ಸಂಖ್ಯೆ. 23, ಹೆಣ್ಣೂರುನಲ್ಲಿ ಪಾದಚಾರಿ ಮಾರ್ಗಗಳ ದುರಸ್ತಿ ಮತ್ತು ನಿರ್ವಹಣೆ ಕಾಮಗಾರಿ. (ಇತರೆ) – **ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 25.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 50,000/–**
3	ವಾರ್ಡ್ ಸಂಖ್ಯೆ. 24, ಹೆಚ್‌ಬಿಆರ್ ಲೇಔಟ್‌ನಲ್ಲಿ ಪಾದಚಾರಿ ಮಾರ್ಗಗಳ ದುರಸ್ತಿ ಮತ್ತು ನಿರ್ವಹಣೆ ಕಾಮಗಾರಿ. (ಪ್ರವರ್ಗ-11(ಎ)) – **ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 25.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 25,000/–**
4	ವಾರ್ಡ್ ಸಂಖ್ಯೆ. 25, ಗೋವಿಂದಪುರದಲ್ಲಿ ಪಾದಚಾರಿ ಮಾರ್ಗಗಳ ದುರಸ್ತಿ ಮತ್ತು ನಿರ್ವಹಣೆ ಕಾಮಗಾರಿ. (ಎಸ್.ಟಿ) – **ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 25.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 25,000/–**
5	ವಾರ್ಡ್ ಸಂಖ್ಯೆ. 28, ವೆಂಕಟೇಶಪುರಂನಲ್ಲಿ ಪಾದಚಾರಿ ಮಾರ್ಗಗಳ ದುರಸ್ತಿ ಮತ್ತು ನಿರ್ವಹಣೆ ಕಾಮಗಾರಿ. (ಇತರೆ) – **ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 25.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 50,000/–**
6	ವಾರ್ಡ್ ಸಂಖ್ಯೆ. 29, ಲಿಂಗರಾಜಪುರದಲ್ಲಿ ಪಾದಚಾರಿ ಮಾರ್ಗಗಳ ದುರಸ್ತಿ ಮತ್ತು ನಿರ್ವಹಣೆ ಕಾಮಗಾರಿ. (ಇತರೆ) – **ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 25.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 50,000/–**
7	ವಾರ್ಡ್ ಸಂಖ್ಯೆ. 30, ಕಚಾರಕನಹಳ್ಳಿಯಲ್ಲಿ ಪಾದಚಾರಿ ಮಾರ್ಗಗಳ ದುರಸ್ತಿ ಮತ್ತು ನಿರ್ವಹಣೆ ಕಾಮಗಾರಿ. (ಇತರೆ) – **ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 25.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 50,000/–**
8	ವಾರ್ಡ್ ಸಂಖ್ಯೆ. 31, ಕಲ್ಯಾಣನಗರದಲ್ಲಿ ಪಾದಚಾರಿ ಮಾರ್ಗಗಳ ದುರಸ್ತಿ ಮತ್ತು ನಿರ್ವಹಣೆ ಕಾಮಗಾರಿ. (ಎಸ್.ಸಿ) – **ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 25.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 25,000/–**
9	ವಾರ್ಡ್ ಸಂಖ್ಯೆ. 32, ಬಾಣಸವಾಡಿಯಲ್ಲಿ ಪಾದಚಾರಿ ಮಾರ್ಗಗಳ ದುರಸ್ತಿ ಮತ್ತು ನಿರ್ವಹಣೆ ಕಾಮಗಾರಿ. (ಇತರೆ) – **ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 25.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 50,000/–**
10	ವಾರ್ಡ್ ಸಂಖ್ಯೆ. 33, ಹೆಚ್‌ಆರ್‌ಬಿಆರ್ ಲೇಔಟ್‌ನಲ್ಲಿ ಪಾದಚಾರಿ ಮಾರ್ಗಗಳ ದುರಸ್ತಿ ಮತ್ತು ನಿರ್ವಹಣೆ ಕಾಮಗಾರಿ. (ಎಸ್.ಸಿ) – **ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 25.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 25,000/–**
11	ವಾರ್ಡ್ ಸಂಖ್ಯೆ. 34, ಸುಬ್ಬಯ್ಯನಪಾಳ್ಯದಲ್ಲಿ ಪಾದಚಾರಿ ಮಾರ್ಗಗಳ ದುರಸ್ತಿ ಮತ್ತು ನಿರ್ವಹಣೆ ಕಾಮಗಾರಿ. (ಪ್ರವರ್ಗ-11(ಎ)) – **ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 25.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 25,000/–**
12	ವಾರ್ಡ್ ಸಂಖ್ಯೆ. 35, ಕಮ್ಮನಹಳ್ಳಿಯಲ್ಲಿ ಪಾದಚಾರಿ ಮಾರ್ಗಗಳ ದುರಸ್ತಿ ಮತ್ತು ನಿರ್ವಹಣೆ ಕಾಮಗಾರಿ. (ಪ್ರವರ್ಗ-11(ಎ)) – **ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 25.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 25,000/–**
13	ವಾರ್ಡ್ ಸಂಖ್ಯೆ. 82, ಬಾಣಸವಾಡಿ ಇಲ್ಲಿನ 10ನೇ ಮುಖ್ಯರಸ್ತೆ, ಹೆಚ್‌ಆರ್‌ಬಿಆರ್ ಲೇಔಟ್‌ನ 1ನೇ ಬ್ಲಾಕ್ ಮತ್ತು ಸುತ್ತುಮುತ್ತ ಪ್ರದೇಶದ ರಸ್ತೆಗಳಲ್ಲಿ ಡಾಂಬರೀಕರಣ ಒದಗಿಸುವ ಕಾಮಗಾರಿ. (ಇತರೆ) – **ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 50.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 1,00,000/–**
14	ವಾರ್ಡ್ ಸಂಖ್ಯೆ. 85, ಮಾರುತಿ ಸೇವಾ ನಗರ ಇಲ್ಲಿನ ಮುನಿಗ ಲೇಔಟ್ ಮತ್ತು ಸುತ್ತುಮುತ್ತ ಪ್ರದೇಶದಲ್ಲಿ ರಸ್ತೆಗಳು ಹಾಗೂ ಚರಂಡಿಗಳ ಸುಧಾರಣೆಗಳ ಕಾಮಗಾರಿ. (ಎಸ್.ಸಿ) – **ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 50.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 50,000/–**
15	ವಾರ್ಡ್ ಸಂಖ್ಯೆ. 77, ನಾಗವಾರ ಇಲ್ಲಿನ ಗೋವಿಂದಪುರದ 14ನೇ ಅಡ್ಡರಸ್ತೆ ಮತ್ತು ಸುತ್ತುಮುತ್ತ ಪ್ರದೇಶದಲ್ಲಿ ರಸ್ತೆಗಳು ಹಾಗೂ ಚರಂಡಿಗಳ ಸುಧಾರಣೆಗಳ ಕಾಮಗಾರಿ. (2ನೇ ಕರೆ) – (ಪ್ರವರ್ಗ-11(ಎ)) – **ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 50.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 50,000/–**
16	ವಾರ್ಡ್ ಸಂಖ್ಯೆ. 81, ಕಮ್ಮನಹಳ್ಳಿ ಇಲ್ಲಿನ 5ನೇ ಮುಖ್ಯರಸ್ತೆ ಮತ್ತು ಸುತ್ತುಮುತ್ತ ಪ್ರದೇಶದ ರಸ್ತೆಗಳಲ್ಲಿ ಡಾಂಬರೀಕರಣ ಒದಗಿಸುವ ಕಾಮಗಾರಿ. (2ನೇ ಕರೆ) – (ಪ್ರವರ್ಗ-11(ಎ)) – **ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 50.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 50,000/–**
17	ವಾರ್ಡ್ ಸಂಖ್ಯೆ. 82, ಬಾಣಸವಾಡಿಯಲ್ಲಿ ಹೊಸ ಕಲ್ವರ್ಟ್‌ಗಳ ನಿರ್ಮಾಣ ಕಾಮಗಾರಿ. (2ನೇ ಕರೆ) – (ಎಸ್.ಟಿ) – **ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 10.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 12,500/–**
18	ವಾರ್ಡ್ ಸಂಖ್ಯೆ. 80, ಕಚಾರಕನಹಳ್ಳಿ ಇಲ್ಲಿನ ಹೆಚ್‌ಆರ್‌ಬಿಆರ್ ಲೇಔಟ್‌ನ 3ನೇ ಬ್ಲಾಕ್ ಹಾಗೂ ರಾಮಯ್ಯ ಲೇಔಟ್ ಮತ್ತು ಸುತ್ತುಮುತ್ತ ಪ್ರದೇಶದ ರಸ್ತೆಗಳಲ್ಲಿ ಡಾಂಬರೀಕರಣ ಒದಗಿಸುವ ಕಾಮಗಾರಿ. **ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 75.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 1,50,000/– (ರೂ. 1.00 ಲಕ್ಷ ಇ-ಪಾವತಿ ಮೂಲಕ ಬಾಕಿ ರೂ. 50,000/– ಬಿಜಿ / ಎಫ್‌ಡಿಆರ್ ಮೂಲಕ ತಾಂತ್ರಿಕ ಬಿಡ್ ತೆರೆಯುವ ಮೊದಲು ಸಲ್ಲಿಸಬೇಕು)**

ಟೆಂಡರ್ ವೇಳಾಪಟ್ಟಿ: 1) ಟೆಂಡರ್ ಡಾಕ್ಯೂಮೆಂಟ್‌ಗಳನ್ನು ಜಿಓಕೆ ಕರ್ನಾಟಕ ಪಬ್ಲಿಕ್ ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ವೆಬ್‌ಸೈಟ್: **https://kppp.karnataka.gov.in** ನಲ್ಲಿ ದಿನಾಂಕ: **11-05-2026** ರಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು. 2) ಬಿಡ್ ಪೂರ್ವಭಾವಿ ಸಭೆಯು ದಿನಾಂಕ: **16-05-2026 ರ ಬೆಳಗ್ಗೆ 11.00 ಗಂಟೆಗೆ ಕಾರ್ಯಪಾಲಕ ಅಭಿಯಂತರರ ಕಛೇರಿ, ಬಿಡಿಎ ಕಟ್ಟಡ, 9ನೇ 'ಸಿ' ಮುಖ್ಯರಸ್ತೆ, ಹೆಚ್‌ಆರ್‌ಬಿಆರ್ ಲೇಔಟ್, 1ನೇ ಬ್ಲಾಕ್, ಬಾಣಸವಾಡಿ, ಬೆಂಗಳೂರು ಇಲ್ಲಿ ನಡೆಯುವುದು.** 3) ಭರ್ತಿ ಮಾಡಿದ ಟೆಂಡರ್ ಡಾಕ್ಯೂಮೆಂಟ್‌ನ್ನು ಸಲ್ಲಿಸುವ ಕೊನೆಯ ದಿನಾಂಕ: **22-05-2026 ರಂದು ಸಂಜೆ 4.00 ಗಂಟೆವರೆಗೆ.** 4) ಟೆಂಡರ್‌ಗಳನ್ನು ತೆರೆಯುವ ದಿನಾಂಕ: **25-05-2026 ರಂದು ಬೆಳಗ್ಗೆ 11.30 ಗಂಟೆಗೆ (ಸಾಧ್ಯವಾದಲ್ಲಿ ಅಥವಾ ಮುಂದಿನ ಕೆಲಸದ ದಿನದಂದು).** ಹೆಚ್ಚಿನ ಮಾಹಿತಿಗಾಗಿ ಮೇಲ್ಕಂಡ ಕಛೇರಿಯನ್ನು ಸಂಪರ್ಕಿಸಬಹುದು.

ಸಹಿ/– ಕಾರ್ಯಪಾಲಕ ಅಭಿಯಂತರರು
ಸರ್ವಜ್ಞನಗರ ವಿಭಾಗ, ವಲಯ-1, ಬೆಂಉನಪಾ.

IN THE COURT OF CITY CIVIL AND SESSION JUDGE AT BENGALURU

OS No. 4349 of 2023

Between :

M/s. Karnataka State Handicrafts Development Corporation Limited, Registered office at No. 39, United Mansion, 2nd Floor, M.G. Road, Bengaluru-560 001- Rep. by its Managing Director Smt. Bharathi

...Plaintiff

AND

Sri. G.C. Kishore Kumar & Others

...Defendants

SUMMON TO DEFENDANT No. 1, 5, 6, 7 and 8 (U/o 5 Rule of 20 of cpc)

1. Sri. G.C. Kishore Kumar
S/o Chikkaveranna, Major by age 56 Years, No. 542, Sonika Shelter, 2nd Floor, 4th Cross, 5th Main Road, in front of Mahatma Gandhi Park, Malagala, Nagarabhavi 2nd Stage, Bengaluru.

5. Sri. H.S. Nagalingaswamy,
S/o. Late Shivanna, Major by age 53 Years, Resident of D. Halasalli Village, Kasaba Hobli, Dhanaguru Post, Malavalli Taluk, Mandya District.

6. Sri. R. Raviraj,
S/o S.R. Raju, Major By age 62 Years, Residing at No. 42, 1st Main Road, 7th Cross Road, Raghavendra Block, Srinagar, Bengaluru.

7. Sri. Narasaiah D,
S/o Devadhanam, Major by Age 58 Years, Proprietor, PNP Enterprises, No. 70, Grace Tower, Millers Road, Bengaluru-560046.

8. PNP Enterprises,
A Proprietary Concern, No. 70, Grace Tower, Millers Road, Bengaluru-560046 Represented by its proprietor Sri. Narasaiah D

Whereas. the Plaintiff Corporation has filed the above suit against the Defendants for recovery of Rs. 25,83,60,294/- from the Defendants along interest and for other consequential reliefs.

That the Defendant No. 1, 5, 6, 7 and 8 are hereby summoned to appear in person or by pleader on **19.06.2026 at 11.00 A.M.** in the Court Hall No. 40, to answer the same, the case will be disposed of exparte.

Given under my hand and seal on this 2nd May 2026 at Bengaluru.

By the order of the Court
Senior Sheristedar,
City Civil Court, Bengaluru.

Advocate for Plaintiff:
B.S. Venkatanarayana & Devaraja L, No. T-3, 27/1, Shalimar Plaza, 10th Cross, Palace Guttahalli Main Road, Malleshwaram, Bengaluru- 560 003.

ಕಾರಾಗೃಹ ಮತ್ತು ಸುಧಾರಣಾ ಸೇವೆ ಇಲಾಖೆ

ಮುಖ್ಯ ಅಧೀಕ್ಷಕರ ಕಾರ್ಯಾಲಯ, ಕೇಂದ್ರ ಕಾರಾಗೃಹ
ಪರಪ್ಪನ ಅಗ್ರಹಾರ, ಎಲೆಕ್ಟ್ರಾನಿಕ್ ಸಿಟಿ ಪೋಸ್ಟ್, ಬೆಂಗಳೂರು-560100,

ಸಂ.: ಕೇಕಾಬೆಂ/ದರಖಾಸ್ತು/1466/2026-27 ದಿನಾಂಕ: 05.05.2026

ಅಲ್ಪಾವಧಿ ಇ-ಟೆಂಡರ್ ನೋಟಿಸ್

2026-27ನೇ ಸಾಲಿಗೆ ಬೆಂಗಳೂರು ಕೇಂದ್ರ ಕಾರಾಗೃಹಕ್ಕೆ ಅವಶ್ಯವಿರುವ ಸಿ.ಸಿ.ಟಿ.ವಿ., ಎಕ್ಸ್-ರೇ ಬ್ಯಾಗೇಜ್ ಸ್ಕ್ಯಾನರ್‌ಗಳು, ಕಂಪ್ಯೂಟರ್ ಮತ್ತು ಪ್ರಿಂಟರ್‌ಗಳನ್ನು ಖರೀದಿಸುವ ಸಲುವಾಗಿ ಕೆ.ಟಿ.ಪಿ.ಪಿ ಕಾಯ್ದೆ ಮತ್ತು ನಿಯಮದನ್ವಯ ಅಲ್ಪಾವಧಿ ಇ-ದರಖಾಸ್ತು ಮೂಲಕ ಖರೀದಿಸಲು ನಿರ್ಧರಿಸಿದೆ.

ಕ್ರ. ಸಂ.	ಟೆಂಡರ್ ಇಂಡೆಂಟ್ ಸಂಖ್ಯೆ	ದರಖಾಸ್ತು ವಿವರ
1	ಇ-ಪೋರ್ಟಲ್‌ನಂತೆ PCSD/2026-27/ IND0267	ಬೆಂಗಳೂರು ಕೇಂದ್ರ ಕಾರಾಗೃಹದಲ್ಲಿ ಎ.ಐ ಸಾಮರ್ಥ್ಯದ ಐ.ಪಿ ಬೇಸಡ್ ಸಿ.ಸಿ.ಟಿ.ವಿ ಸಿಸ್ಟಮ್ ಅಳವಡಿಸುವ ಬಗ್ಗೆ.
2	ಇ-ಪೋರ್ಟಲ್‌ನಂತೆ PCSD/2026-27/ IND0268	ಬೆಂಗಳೂರು ಕೇಂದ್ರ ಕಾರಾಗೃಹಕ್ಕೆ ಕಂಪ್ಯೂಟರ್ ಮತ್ತು ಪ್ರಿಂಟರ್‌ಗಳನ್ನು ಖರೀದಿಸುವ ಬಗ್ಗೆ.
3	ಇ-ಪೋರ್ಟಲ್‌ನಂತೆ PCSD/2026-27/ IND0269	ಬೆಂಗಳೂರು ಕೇಂದ್ರ ಕಾರಾಗೃಹದಲ್ಲಿ ಎಕ್ಸ್-ರೇ ಬ್ಯಾಗೇಜ್ ಸ್ಕ್ಯಾನರ್ ಖರೀದಿಸುವ ಬಗ್ಗೆ.

ಇ.ಎಂ.ಡಿ ಮೊತ್ತ (ರೂ.ಗಳಲ್ಲಿ): ಇ-ಪೋರ್ಟಲ್‌ನಂತೆ. **ಬಿಡ್ ಸಲ್ಲಿಸಲು ಕೊನೆಯ ದಿನಾಂಕ:** ಇ-ಪೋರ್ಟಲ್‌ನಂತೆ. ದರಖಾಸ್ತುದಾರರು ಹೆಚ್ಚಿನ ಮಾಹಿತಿಯನ್ನು **kppp.karnataka.gov.in or Helpline No. +91-8046010000, +91-8068948777** ಗಳಿಗೆ ಸಂಪರ್ಕಿಸಿ ಪಡೆಯಬಹುದಾಗಿದೆ.

ಸಹಿ/– ಮುಖ್ಯ ಅಧೀಕ್ಷಕರು
ಕೇಂದ್ರ ಕಾರಾಗೃಹ, ಬೆಂಗಳೂರು.

DIPR/CP/503/SA/2026-27

ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ವಿಜಯಪುರ.

ಕುಲಸಚಿವರ ಕಛೇರಿ, ಜ್ಞಾನ-ಶಕ್ತಿ ಆವರಣ (ತೊರವಿ)
ದೂರವಾಣಿ: 08352-297068, ವೆಬ್‌ಸೈಟ್:www.kswu.ac.in
No:KSAWUV/EXAM/E-Tender/2026-27/323 Date: 30.04.2026

ಅಲ್ಪಾವಧಿ ಟೆಂಡರ್ ಅಧಿಸೂಚನೆ ಪ್ರಕಟಣೆ

ಕರ್ನಾಟಕ ಸರ್ಕಾರದ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಆಧ್ಯಾದೇಶ 1992-2000ರ ಪ್ರಕಾರ ಅಧಿನಿಯಮ 2000ರ ನಿಯಮದಂತೆ ನೊಂದಾಯಿತ ಅರ್ಹ ಗುತ್ತಿಗೆದಾರರಿಂದ ಇ-ಪ್ರಾಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ ಟೆಂಡರನ್ನು ಈ ಕೆಳಕಂಡ ಸಹಿ ಮಾಡಿರುವವರು ಆಹ್ವಾನಿಸಿರುತ್ತಾರೆ.
ಉಳಿದ ವಿವರಗಳನ್ನು ಗುತ್ತಿಗೆ ದಸ್ತಾವೇಜುಗಳಲ್ಲಿ ನೋಡಬಹುದು.

01. ಕಾಮಗಾರಿಯ ಹೆಸರು: Printing and Supply of Theory Answer Booklets to Karnataka State Akkamahadevi Womens University Vijayapura. ಟೆಂಡರ ಮೊತ್ತ ರೂ. 1,48,80,000/–. ಟೆಂಡರ್ ಸಂಖ್ಯೆ: KSWU/2025-26/IND 0024/Call-2. ಬಡ್ಡಿ ರಹಿತ ಇ.ಎಂ.ಡಿ ರೂ. **2,23,500/–. ಅವಧಿ: 365 ದಿನಗಳು.**

ಹೆಚ್ಚಿನ ವಿವರ / ವಿಚಾರಣೆಗೆ ಇ-ಪ್ರಾಕ್ಯೂರ್‌ಮೆಂಟ್ http://kppp.karnataka.gov.in ನಿಂದ ಟೆಂಡರ್ ದಾಖಲಾತಿಗಳನ್ನು ಡೌನಲೋಡ್ ಮಾಡಿಕೊಳ್ಳಬಹುದಾಗಿದೆ. ಏಜೆನ್ಸಿದಾರರ ಅರ್ಹತೆ / ಟೆಂಡರಿನ ನಿಯಮ/ ಟೆಂಡರ್ ಪ್ರೋಸೆಸ್ಸಿಂಗ್ ಶುಲ್ಕ, ತುಂಬುವ ವಿಧಾನ ಇತ್ಯಾದಿ ವಿವರಗಳಿಗೆ http://kppp.karnataka.gov.in ಮೂಲಕ ಮಾಹಿತಿಯನ್ನು ಪಡೆಯಬಹುದು. ಹೆಚ್ಚಿನ ಮಾಹಿತಿಯನ್ನು ಸದರಿ ಕಛೇರಿಯಿಂದ ಹಾಗೂ ಸಹಾಯಕ ದೂರವಾಣಿ ಸಂಖ್ಯೆ:08352-297068, 8722116613 ರಿಂದ ಪಡೆಯಬಹುದು.

ಸಹಿ/– ಕುಲಸಚಿವರು,
ಕರ್ನಾಟಕ ರಾಜ್ಯ ಅಕ್ಕಮಹಾದೇವಿ
ಮಹಿಳಾ ವಿಶ್ವವಿದ್ಯಾನಿಲಯ, ವಿಜಯಪುರ

ವಾಸಾಸಂಇ/ವಿಜಯಪುರ/77/ ಕೆಎಸ್‌ಎಂಸಿಎ/2026-27

ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತ

(ಕರ್ನಾಟಕ ಸರ್ಕಾರದ ಉದ್ಯಮ)
ಕಾರ್ಯಪಾಲಕ ಇಂಜಿನಿಯರ್ ರವರ ಕಛೇರಿ, ವಿಜನಿನಿ ಎತ್ತಿನಹೊಳೆ ಯೋಜನಾ ವಿಭಾಗ, ನಂ:4
ಮಧುಗಿರಿ, ತುಮಕೂರು ಜಿಲ್ಲೆ.-572132,
ದೂ ಸಂಖ್ಯೆ: 08137-282112 Email:eeyetmadhugiri4@gmail.com

ಕ್ರ.ಸಂ:ಕಾಇಂ/ವಿಜನಿನಿ/ಎಹೊಯೋ/ಮ/ವಿ.04/ಟೆ.ಅ-04&05/2026-27 ದಿನಾಂಕ : 24.04.2026

ಅಲ್ಪಾವಧಿ ಟೆಂಡರ್ ಪ್ರಕಟಣೆ (ಕೆ.ಪಿ.ಪಿ-ಪ್ರೊಕ್ಯೂರ್‌ಮೆಂಟ್ ಮುಖಾಂತರ)

ವ್ಯವಸ್ಥಾಪಕ ನಿರ್ದೇಶಕರು, ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತ. ಬೆಂಗಳೂರು ಇವರ ಪರವಾಗಿ ಈ ಕೆಳಗೆ ಸಹಿ ಮಾಡಿರುವವರಿಂದ ಕರ್ನಾಟಕ ಸರ್ಕಾರದ ಇ-ಪ್ರೊಕ್ಯೂರ್‌ಮೆಂಟ್ 2.0 ಪೋರ್ಟಲ್‌ನಲ್ಲಿ ಮಧುಗಿರಿ ವಿಭಾಗ ವ್ಯಾಪ್ತಿಯಲ್ಲಿ ಟೆಂಡರ್ ಅಧಿಸೂಚನೆ 04/2026-27 ದಿನಾಂಕ 29.04.2026ರಲ್ಲಿ ಎತ್ತಿನಹೊಳೆ ಯೋಜನೆಯಡಿ ರೂ.3089.65 ಲಕ್ಷದ ಸ್ವಿಚ್ಚಿಂಗ್ ಸ್ಟೇಷನ್ ಕಾಮಗಾರಿ ಹಾಗೂ ಟೆಂಡರ್ ಅಧಿಸೂಚನೆ 05/2026-27 ದಿನಾಂಕ : 29.04.2026 ರಲ್ಲಿ ನೆಲಮಂಗಲ ವಿಧಾನ ಸಭಾ ಕ್ಷೇತ್ರದ 02 ಕಾಮಗಾರಿಗಳಿಗೆ **ರೂ.253.40 & ರೂ.295.74** ಲಕ್ಷಗಳಿಗೆ ಟೆಂಡರ್ ಅಹ್ವಾನಿಸಲಾಗಿರುತ್ತದೆ. ಸದರಿ ಕಾಮಗಾರಿಗಳಿಗೆ Percentage Tender ಮೂಲಕ ಅರ್ಹ ಬಿಡ್ಡುದಾರರಿಂದ ಶೇಕಡಾವಾರು ದರಗಳ ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ. ಇ-ಪ್ರೊಕ್ಯೂರ್‌ಮೆಂಟ್‌ನ https://kppp.karnataka.gov.in ವೆಬ್ ಸೈಟ್ ಮೂಲಕ ಟೆಂಡರ್‌ಗಳನ್ನು ಸಲ್ಲಿಸಬಹುದಾದ ದಿನಾಂಕಗಳ ವಿವರ ಈ ಕೆಳಗಿನಂತಿದೆ.

ಕ್ರಸಂ	ಘಟನೆಗಳ ಕ್ಯಾಲೆಂಡರ್	ಟೆಂಡರ್ ಅಧಿಸೂಚನೆ:04/2026-27 ದಿನಾಂಕ: 29.04.2026 ರ ದಿನಾಂಕಗಳ ವಿವರ	ಟೆಂಡರ್ ಅಧಿಸೂಚನೆ:05/2026-27 ದಿನಾಂಕ: 29.04.2026ರ ದಿನಾಂಕಗಳ ವಿವರ
1	ಇ-ಪ್ರೊಕ್ಯೂರ್‌ಮೆಂಟ್ ನ https://kppp.karnataka.gov.in ವೆಬ್ ಸೈಟ್ ಮೂಲಕ ಟೆಂಡರ್‌ಗಳನ್ನು ಸಲ್ಲಿಸಬಹುದಾದ ದಿನಾಂಕ	02.05.2026 ರಿಂದ 11.05.2026 ಸಂಜೆ 5:00 ಗಂಟೆಯವರೆಗೆ	04.05.2026 ರಿಂದ 14.05.2026 ಸಂಜೆ 5:30 ಗಂಟೆಯವರೆಗೆ
2	ಕೆಪಿಪಿ-ಪೋರ್ಟಲ್ ಮೂಲಕ ಪೂರ್ಣಗೊಂಡ ಟೆಂಡರ್ ದಾಖಲೆಗಳನ್ನು ಸಲ್ಲಿಸಲು ಕೊನೆಯ ದಿನಾಂಕ.	11.05.2026 ಸಂಜೆ 5:00 ಗಂಟೆಯವರೆಗೆ	14.05.2026 ಸಂಜೆ 5:00 ಗಂಟೆಯವರೆಗೆ
3	ಕಾಮಗಾರಿಗಳ ಟೆಂಡರ್‌ಗಿಟ್ಟ ಮೊತ್ತ, ನಿಗದಿಪಡಿಸಿದ ಇ.ಎಂ.ಡಿ ಮೊತ್ತ, ಬಿಡ್ಡುದಾರರ ದರ್ಜೆ, ಟೆಂಡರ್ ನಿಯಮ, ಟೆಂಡರ್ ಪ್ರೋಸೆಸಿಂಗ್ ಶುಲ್ಕ ಇತ್ಯಾದಿ ವಿವರಗಳನ್ನು ಪಡೆಯಬಹುದಾದ ದಿನಾಂಕ	06.05.2026 ರ ಸಂಜೆ 3:00 ಗಂಟೆಯವರೆಗೆ	08.05.2026 ರ ಸಂಜೆ 3:00 ಗಂಟೆಯವರೆಗೆ
4	ಪ್ರಿ-ಬಿಡ್ ಮೀಟಿಂಗ್,	06.05.2026 ರಂದು ಬೆಳಗ್ಗೆ 11.00ಗಂಟೆಗೆ ಸ್ಥಳ: ವ್ಯವಸ್ಥಾಪಕ ನಿರ್ದೇಶಕ, ವಿಜನಿನಿ ಕಛೇರಿ, ಎಂಬಸ್ಸಿ ಸ್ಕ್ವಯರ್, ಬೆಂಗಳೂರು	08.05.2026ರಂದು ಬೆಳಗ್ಗೆ 11.00ಗಂಟೆಗೆ ಸ್ಥಳ: ಕಾರ್ಯಪಾಲಕ ಇಂಜಿನಿಯರ್, ಎತ್ತಿನಹೊಳೆ ಯೋಜನಾ, ವಿಭಾಗ ನಂ.4 ಮಧುಗಿರಿ ರವರ ಕಛೇರಿಯಲ್ಲಿ.
5	ತಾಂತ್ರಿಕ ಬಿಡ್ ಅನ್ನು ಕಾರ್ಯಪಾಲಕ ಇಂಜಿನಿಯರ್, ಎತ್ತಿನಹೊಳೆ ಯೋಜನಾ, ವಿಭಾಗ ನಂ.4 ಮಧುಗಿರಿ ರವರ ಕಛೇರಿಯಲ್ಲಿ ತೆರೆಯುವ ದಿನಾಂಕ	13.05.2026 ರಂದು ಬೆಳಿಗ್ಗೆ 11:00 ಗಂಟೆಗೆ	14.05.2026 ರಂದು ಬೆಳಿಗ್ಗೆ 11:00 ಗಂಟೆಗೆ
6	ಆರ್ಥಿಕ ಬಿಡ್ ಅನ್ನು ಕಾರ್ಯಪಾಲಕ ಇಂಜಿನಿಯರ್, ಎತ್ತಿನಹೊಳೆ ಯೋಜನಾ, ವಿಭಾಗ ನಂ.4 ಮಧುಗಿರಿ ರವರ ಕಛೇರಿಯಲ್ಲಿ ತೆರೆಯುವ ದಿನಾಂಕ	ತಾಂತ್ರಿಕ ಬಿಡ್ ಗೆ ಅನುಮೋದನೆ ದೊರೆತ ನಂತರ	ತಾಂತ್ರಿಕ ಬಿಡ್ ಗೆ ಅನುಮೋದನೆ ದೊರೆತ ನಂತರ

ಟೆಂಡರ್‌ಗಳನ್ನು ಸ್ವೀಕರಿಸುವ ಅಧಿಕಾರಿಯು ಯಾವುದೇ ಕಾರಣ ನೀಡದೆ ಯಾವುದೇ ಟೆಂಡರ್‌ಗಳನ್ನು ಅಥವಾ ಎಲ್ಲಾ ಟೆಂಡರ್‌ಗಳನ್ನು ತಿರಸ್ಕರಿಸುವ ಅಧಿಕಾರವನ್ನು ಹೊಂದಿರುತ್ತಾರೆ.

ಸಹಿ/– ಕಾರ್ಯಪಾಲಕ ಇಂಜಿನಿಯರ್,
ವಿಜನಿನಿ, ಎತ್ತಿನಹೊಳೆ ಯೋಜನಾ ವಿಭಾಗ ನಂ.4, ಮಧುಗಿರಿ

DIPR/TUM/55/KSMCA/2026-27